ಸಂಪುಟ : 10 ಸಂಚಿಕೆ: 185 ಪುಟ : 4+2 ಬೆಲೆ: 3.00 ಶನಿವಾರ ಆಗಸ್ಟ್ 30 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 185 Pages : 4+2 Price : 3.00 Saturday August 30 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸೆ.2ರಂದು ಪೂರ್ವಭಾವಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಈ ವರ್ಷವೂ ಸೆಪ್ಟೆಂಬರ್ 17ರಂದು ಆಚರಿಸಲಾಗುವ ಭಗವಾನ್ ಶ್ರೀ ವಿಶ್ವಕರ್ಮ ಜಯಂತಿ ನಿಮಿತ್ತ ಸೆಪ್ಟೆಂಬರ್ 2 ರಂದು ಮಂಗಳವಾರ ಮಧ್ಯಾಹ್ನ:12.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊಳೆ ಇಟಗಿ ಬ್ಯಾಲಹುಣಸಿ ಬ್ರಿಡ್ಜ್ ನಿರ್ಮಾಣಕ್ಕೆ ಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ಹೊಳೆ ಇಟಗಿಯಿಂದ ಬ್ಯಾಲಹುಣಸಿ ಗ್ರಾಮದವರೆಗೆ ತುಂಗಭದ್ರಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ನಿರ್ಮಾಣ ಮಾಡಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಭರವಸೆ ನೀಡಿದ್ದಾರೆ.

ಈ ಕುರಿತು ಜುಲೈ 30ರಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿಯವರು ಪತ್ರದ ಮೂಲಕ ಕೇಂದ್ರ ಸಚಿವ ನಿತಿನ್ ಗಡ್ಕರಿಯವರಿಗೆ ಮನವಿ ಮಾಡಿದ್ದರು. ಅವರ ಮನವಿಗೆ



ಸ್ಪಂದಿಸಿರುವ ಕೇಂದ್ರ ಸಚಿವ ನಿತಿನ್ ಗಡ್ಕರಿಯವರು, ಹೊಳೆ ಇಟಗಿಯಿಂದ ಬ್ಯಾಲಹುಣಸಿ ಗ್ರಾಮದವರೆಗೆ ಬ್ರಿಡ್ಜ್ ನಿರ್ಮಾಣ ಮಾಡುವ ಕುರಿತು ಗಮನ ಹರಿಸಿದ್ದು, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

### 'ರಾಷ್ಟ್ರೀಯ ಕ್ರೀಡಾ ದಿನಾಚರಣೆ'ಯನ್ನು ಉದ್ಘಾಟಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಮತ

# ಕ್ರೀಡೆಗಳಿಂದ ವ್ಯಕ್ತಿತ್ವ ವಿಕಸನ

**■ವಿಜಯಸಾಕ್ಷಿ ಸುದ್ದಿ, ಗದಗ**

ವ್ಯಕ್ತಿಯ ವ್ಯಕ್ತಿತ್ವ ಪೂರ್ಣ ಪ್ರಮಾಣದಲ್ಲಿ ವಿಕಸನವಾಗುವಲ್ಲಿ ಕ್ರೀಡೆಗಳ ಪಾತ್ರ ಮಹತ್ವದ್ದಾಗಿದೆ. ವ್ಯಕ್ತಿಯ ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಕ್ರೀಡೆಯಲ್ಲಿ ತೊಡಗುವುದು ಅವಶ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಪ್ರಾಯಪಟ್ಟರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಇವರ ಸಹಯೋಗದಲ್ಲಿ ಮೇಜರ್ ಧ್ಯಾನಚಂದ್ ಅವರ ಜನ್ಮದಿನದ ಅಂಗವಾಗಿ ಶುಕ್ರವಾರ ಗದಗ-ಬೆಟಗೇರಿಯ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 'ರಾಷ್ಟ್ರೀಯ ಕ್ರೀಡಾ ದಿನಾಚರಣೆ'ಯನ್ನು ಉದ್ಘಾಟಿಸಿ ಮಾತನಾಡಿದರು.



ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಹಾಕಿ ಕ್ರೀಡೆಯನ್ನು ಉತ್ತೇಜಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಗದಗ ಜಿಲ್ಲೆಯ ಹಾಕಿ ಕ್ರೀಡಾಪಟುಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಮಿಂಚಿ ಪ್ರಶಸ್ತಿ ಪಡೆದಿದ್ದಾರೆ. ಹಾಕಿ, ಕುಸ್ತಿ ಮತ್ತು ಸೈಕ್ಲಿಂಗ್ ಪಂದ್ಯಾವಳಿಗಳು ಮೂರು ದಿನಗಳ ಕಾಲ ನಡೆಯಲಿವೆ. ಹಾಕಿ ಪಂದ್ಯಾವಳಿ ಆಗಸ್ಟ್ 29ರಂದು ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ 4 ತಂಡಗಳಿಂದ ಮೂರು ಪಂದ್ಯಗಳು ನಡೆಯಲಿವೆ. ಕುಸ್ತಿ ಪಂದ್ಯಾವಳಿಗಳು ಆಗಸ್ಟ್ 30ರಂದು ಬೆಳಿಗ್ಗೆ 10.30 ಗಂಟೆಗೆ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಕುಸ್ತಿ ಮನೆಯಲ್ಲಿ ನಡೆಯಲಿದೆ. ಸೈಕ್ಲಿಂಗ್ ಜಾಥಾವು ಆಗಸ್ಟ್ 31ರ ಬೆಳಿಗ್ಗೆ 10.30ಕ್ಕೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಶ್ರೀ ಬಸವೇಶ್ವರ ಪುತ್ಥಳಿಯವರೆಗೆ ಜರುಗಲಿದೆ ಎಂದು ತಿಳಿಸಿದರು.

> ಕರ್ನಾಟಕದಲ್ಲಿ ಹಾಕಿ ಎಂದರೆ ಮೊದಲ ನೆನಪಾಗುವುದು ಕೊಡಗು, ನಂತರ ಗದಗ ಜಿಲ್ಲೆಯಾಗಿದೆ. ಹಾಕಿ ಕ್ರೀಡೆಗೆ ಗದಗ ಜಿಲ್ಲೆಯ ಕೊಡಗೆ ಅಪಾರವಾಗಿದೆ. ಕ್ರೀಡಾಪಟುಗಳು ಹಾಕಿ ಗ್ರೌಂಡ್‌ನ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನುಡಿದರು.

ಗದಗ-ಬೆಟಗೇರಿಯ ಶ್ರೀ ಹನುಮಾನ್ ಬ್ಲೆಸ್ಸಿಂಗ್ ಕ್ಲಬ್ ಅಧ್ಯಕ್ಷರು ಹಾಗೂ ಸರ್ವ ಪದಾಧಿಕಾರಿಗಳು, ಸೈಕ್ಲಿಂಗ್ ಮತ್ತು ಕುಸ್ತಿ ಅಸೋಸಿಯೇಷನ್, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಅಧ್ಯಕ್ಷರು, ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳು ಪ್ರಾರ್ಥಿಸಿದರು. ಪ್ರಾಧ್ಯಾಪಕ ಬಾಹುಬಲಿ ಜೈನರ್ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ನಗರಸಭೆ ಸದಸ್ಯರಾದ ಸುರೇಶ ಕಟ್ಟಿಮನಿ, ವೈ.ಜಿ. ಗಡಾದ, ಕೃಷ್ಣಪ್ಪ ಬಾಗಲಕೋಟೆ, ಹನುಮಂತಪ್ಪ ವೀರಾಪುರ್, ಚಂದ್ರು ಚೌಹಾನ್, ದೀಪಕ್ ಗಾಗಡೇ, ಪ್ರವೀಣ್ ಚಪ್ಪರಮನಿ, ಮಂಜುನಾಥ್ ಬಾಗಲಕೋಟಿ, ವಾಸು ಕಲ್ಕಂಬಿ, ಯುವಜನ ಸಬಲೀಕರಣ ಕ್ರೀಡಾ ಇಲಾಖೆಯ ಅಧೀಕ್ಷಕ ಜಗದೀಶ್ ಹೊಳ್ಳಟ್ಟಿ ಮುಂತಾದವರು ಹಾಜರಿದ್ದರು.

### 'ಜಿಎಸ್‌ಟಿ ಸರಳೀಕರಣ, ರಾಜ್ಯಗಳ ಸ್ವಾಯತ್ತತೆ' ಸಂಬಂಧಿಸಿದ ಸಭೆಯಲ್ಲಿ ಸಚಿವ ಕೃಷ್ಣ ಬೈರೇಗೌಡ ಕಳವಳ

# ಜಿಎಸ್‌ಟಿ ಸರಳೀಕರಣದಿಂದ ರಾಜ್ಯಗಳಿಗೆ ನಷ್ಟ ಸಾಧ್ಯತೆ



> ರಾಜ್ಯಗಳಿಗೆ ಅಧಿಕ ನಷ್ಟವಾದರೆ ಅಂತಿಮವಾಗಿ ಜನ ಸಾಮಾನ್ಯರು ಸಂಕಷ್ಟಕ್ಕೆ ಒಳಗಾಗುತ್ತಾರೆ. ರಾಜ್ಯಗಳ ಸ್ವಾಯತ್ತತೆ ಮುಖ್ಯವಾದ ವಿಚಾರ. ಪ್ರತಿಯೊಂದು ರಾಜ್ಯಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸುಸ್ಥಿರ ಆದಾಯ ಅತ್ಯಂತ ಮುಖ್ಯ. ಆದರೆ, ಆದಾಯ ಕೊರತೆ ಉಂಟಾಗಿ ಸ್ವಂತ ಸರ್ಕಾರ ನಡೆಸಲು ಕೇಂದ್ರದ ಕಡೆ ಕೈಚಾಚುವಂತಾದರೆ ರಾಜ್ಯಗಳ ಸ್ವಾಯತ್ತತೆ ಎಂಬ ಪದವೇ ಅರ್ಥ ಕಳೆದುಕೊಳ್ಳುತ್ತದೆ. ಸಹಕಾರಿ ಒಕ್ಕೂಟವಾದ ಪದಗಳಲ್ಲಿ ಮಾತ್ರವಲ್ಲದೆ ಕೆಲಸದಲ್ಲೂ ಚಾಲ್ತಿ ಇದ್ದರೆ ಮಾತ್ರ ಸ್ವಾಯತ್ತತೆ ಉಳಿಯಲು ಸಾಧ್ಯ ಎಂದು ಸಚಿವ ಕೃಷ್ಣ ಬೈರೇಗೌಡ ವ್ಯಾಖ್ಯಾನಿಸಿದರು.

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕೇಂದ್ರ ಸರ್ಕಾರ ಪ್ರಸ್ತಾಪಿಸಿರುವ ಜಿಎಸ್‌ಟಿ ಸರಳೀಕರಣ ವ್ಯವಸ್ಥೆಯಿಂದ ರಾಜ್ಯಗಳ ಆದಾಯದಲ್ಲಿ 85,000 ಕೋಟಿಯಿಂದ 2.5 ಲಕ್ಷ ಕೋಟಿವರೆಗೆ ನಷ್ಟ ಉಂಟಾಗಲಿದ್ದು, ಜಿಎಸ್‌ಟಿ ಸ್ಥಿರಗೊಳ್ಳುವವರೆಗೆ ಜಿಎಸ್‌ಟಿ ಕೌನ್ಸಿಲ್ ನಷ್ಟ ಪರಿಹಾರ ನೀಡಲಿ ಎಂದು ಸಚಿವ ಕೃಷ್ಣ ಬೈರೇಗೌಡ ಒತ್ತಾಯಿಸಿದರು.

'ಜಿಎಸ್‌ಟಿ ಸರಳೀಕರಣ ಹಾಗೂ ರಾಜ್ಯಗಳ ಸ್ವಾಯತ್ತತೆ'ಗೆ ಸಂಬಂಧಿಸಿ ಶುಕ್ರವಾರ ದೆಹಲಿಯ ಕರ್ನಾಟಕ ಭವನದಲ್ಲಿ ಸಮಾನ ಮನಸ್ಕ ಎಂಟು ರಾಜ್ಯಗಳ ಸಚಿವರು ಹಾಗೂ ಅಧಿಕಾರಿಗಳ ಸಭೆಯ ನಂತರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ, ಜಿಎಸ್‌ಟಿ ಕೌನ್ಸಿಲ್ ನಮ್ಮ ಮುಂದಿಟ್ಟಿರುವ ಜಿಎಸ್‌ಟಿ ತೆರಿಗೆ ಸರಳೀಕರಣ ವ್ಯವಸ್ಥೆಯನ್ನು ನಾವು ಸ್ವಾಗತಿಸುತ್ತೇವೆ. ಆದರೆ, ಈ ವ್ಯವಸ್ಥೆ ರಾಜ್ಯಗಳ ತೆರಿಗೆ ಆದಾಯವನ್ನು ರಕ್ಷಿಸುವಂತಿರಬೇಕು ಹಾಗೂ ಇದರ ಸಂಪೂರ್ಣ ಲಾಭ ದೇಶದ ಜನಸಾಮಾನ್ಯರಿಗೆ ಸಿಗುವಂತಿರಬೇಕೇ ಹೊರತು ಕೆಲವು ಕಂಪೆನಿಗಳಿಗೆ ಮಾತ್ರ ಲಾಭ ಆಗುವಂತಿರಬಾರದು ಎಂದು ಅಭಿಪ್ರಾಯಪಟ್ಟರು.

ಪ್ರಸ್ತಾವಿತ ಜಿಎಸ್‌ಟಿ ಸರಳೀಕರಣದಿಂದ ರಾಜ್ಯ ಸರ್ಕಾರಗಳಿಗೆ ಯಾವ ಪ್ರಮಾಣದಲ್ಲಿ ಆದಾಯ ಖೋತಾ ಆಗಬಹುದು ಎಂಬ ಅಂದಾಜಿನ ಕುರಿತು ಕೇಂದ್ರ ಸರ್ಕಾರ ಈವರೆಗೆ ಯಾವುದೇ ಮಾಹಿತಿ ನೀಡಿಲ್ಲ. ರಾಜ್ಯ ಸರ್ಕಾರಗಳಿಗೆ ಆದಾಯ ನಷ್ಟ ಉಂಟಾದರೆ ಕೇಂದ್ರ ಸರ್ಕಾರಕ್ಕೂ ನಷ್ಟವಾಗಲಿದೆ. ಹೀಗಾಗಿ ಜಿಎಸ್‌ಟಿ ಸ್ಥಿರಗೊಳ್ಳುವವರೆಗೆ ಕೇಂದ್ರ ಸರ್ಕಾರ ತಮ್ಮ ಖಜಾನೆಯಿಂದ ಒಂದು ರೂಪಾಯಿಯನ್ನೂ ನೀಡುವ ಅಗತ್ಯವಿಲ್ಲ. ಬದಲಿಗೆ ಜಿಎಸ್‌ಟಿ ಕೌನ್ಸಿಲ್ ಪರಿಧಿಯಲ್ಲೇ ಪ್ರತಿಯೊಂದು ರಾಜ್ಯಗಳಿಗೂ ಪರಿಹಾರ ನೀಡಲಿ ಎಂದು ಒತ್ತಾಯಿಸಿದರು.

ಜಿಎಸ್‌ಟಿ ತೆರಿಗೆ ವ್ಯವಸ್ಥೆಯನ್ನು 2017ರಲ್ಲಿ ಪರಿಚಯಿಸುವಾಗ ಕೇಂದ್ರ ಸರ್ಕಾರ ಜಿಎಸ್‌ಟಿ ಸ್ಥಿರಗೊಳ್ಳುವವರೆಗೆ ರಾಜ್ಯಗಳಿಗೆ ತೆರಿಗೆ ನಷ್ಟ ಪರಿಹಾರ ನೀಡಬೇಕು ಎಂದು ಹೇಳಿತ್ತು. ಆದರೆ, ಪರಿಹಾರ ವ್ಯವಸ್ಥೆಯನ್ನು 2022ಕ್ಕೆ ತೆಗೆದುಹಾಕಲಾಗಿತ್ತು. ಪರಿಣಾಮ ಬಹುಪಾಲು ರಾಜ್ಯಗಳು ಶೇ.25ರಷ್ಟು ಆದಾಯ ನಷ್ಟ ಎದುರಿಸಿದ್ದವು. ರಾಜ್ಯಗಳ ಆದಾಯ ಶೇ.25ರಷ್ಟು ಕುಸಿಯುತ್ತಿದ್ದ ಸಂದರ್ಭದಲ್ಲಿ ಜಿಎಸ್‌ಟಿ ಸ್ಥಿರಗೊಂಡಿದೆ ಎಂದು ಹೇಗೆ ಹೇಳುತ್ತೀರಿ ಎಂದು ಪ್ರಶ್ನಿಸಿದರು.


## 'ಧರ್ಮಸ್ಥಳ ಚಲೋ' ಪೂರ್ವಭಾವಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಮನದ ಮಾತು (ಮನ್ ಕೀ ಬಾತ್) ಕಾರ್ಯಕ್ರಮ ಹಾಗೂ ಧರ್ಮಸ್ಥಳದಲ್ಲಿ ಸೆಪ್ಟೆಂಬರ್ 1ರಂದು ನಡೆಯುವ ಸಮಾವೇಶದ ಕುರಿತು ಪೂರ್ವಭಾವಿ ಸಭೆ ಜರುಗಿತು.



ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಸವರಾಜ ಕೆಲಗಾರ, ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಶಾಸಕ ಡಾ. ಚಂದ್ರು ಲಮಾಣಿ, ಪಕ್ಷದ ಚುನಾವಣಾಧಿಕಾರಿ ಶಶಿಮೌಳಿ ಕುಲಕರ್ಣಿ, ಸಹ ಚುನಾವಣಾಧಿಕಾರಿ ಎಂ.ಎಸ್. ಕರೀಗೌಡ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ, ಆರ್.ಕೆ. ಚವ್ಹಾಣ, ಫಕ್ಕಿರೇಶ ರಟ್ಟಿಹಳ್ಳಿ, ಬಿ.ಡಿ. ಪಲ್ಲೇದ, ಬಿಜೆಪಿ ಮಂಡಲಗಳ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಮನ್ ಕೀ ಬಾತ್ ಸಂಚಾಲಕರು, ಮುಖಂಡರು ಉಪಸ್ಥಿತರಿದ್ದರು.





1. ಮುಳಗುಂದ ಪಟ್ಟಣದ ಸಿದ್ದೇಶ್ವರ ದೇವಸ್ಥಾನ ಹತ್ತಿರದ ಹಿಂದೂ ಮಾಹಾಗಣಪತಿ ಮೂರ್ತಿ.
2. ಮುಳಗುಂದ ಪಟ್ಟಣದ ಕೋಟಿ ಓಣಿಯ ಯುವ ಸೇನೆ ಪ್ರತಿಷ್ಠಾಪಿಸಿರುವ ಗಣಪತಿ ಮೂರ್ತಿ.
3. ಮುಳಗುಂದ ಪಟ್ಟಣದ ಗಜಸೇನೆ ಯುವಕ ಮಂಡಳ ಪ್ರತಿಷ್ಠಾಪಿಸಿರುವ ಗಣೇಶ ಮೂರ್ತಿ.

### ಹೆಸರು ಬೆಳೆದರೂ ಹಸನಾಗದ ರೈತರ ಬದುಕು | ಬೆಳೆದ ತಪ್ಪಿಗೆ ದಂಡ ತೆರಬೇಕಾದ ಪರಿಸ್ಥಿತಿಯಲ್ಲಿ ರೈತ

# ಬೆಳೆಯೂ ಇಲ್ಲ, ಬೆಲೆಯೂ ಇಲ್ಲ



> ಅಳಿದುಳಿದ ಒಂದಷ್ಟು ಬೆಳೆಯನ್ನು ಒಕ್ಕಲಿ ಮಾಡಿ ಮಾರುಕಟ್ಟೆಗೆ ತಂದರೂ ಕೇಳಿದ ಬೆಲೆಗೆ ಕೊಡಲೇಬೇಕಾಗಿದೆ. ಎಕರೆಗೆ ಕನಿಷ್ಟ 25/30 ಸಾವಿರ ರೂ ಖರ್ಚು ಮಾಡಿದ್ದೆವು. ಆದರೆ ಈಗ ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿ ಪೆಟ್ಟು ಅನುಭವಿಸುವ ಸ್ಥಿತಿ ನಮ್ಮದಾಗಿದೆ. ಹೆಸರಷ್ಟೇ ಅಲ್ಲದೇ ಮುಂಗಾರಿನ ಎಲ್ಲ ಬೆಳೆಗಳು ಹಾಳಾಗಿವೆ. ಹಿಂಗಾರಿನ ಬಿತ್ತನೆಗೆ ಮತ್ತೆ ಸಾಲ ಮಾಡಬೇಕು. ಆದ್ದರಿಂದ ಸರ್ಕಾರ ಅತಿವೃಷ್ಟಿ ಪರಿಹಾರ ಯೋಜನೆಯಡಿ ಹೆಸರು ಸೇರಿ ಮುಂಗಾರಿನಲ್ಲಿ ಹಾನಿಗೀಡಾದ ಎಲ್ಲ ಬೆಳೆಗಳಿಗೆ ಪ್ರತಿ ಎಕರೆಗೆ ಕನಿಷ್ಠ 20 ಸಾವಿರ ರೂ ಬೆಳೆಹಾನಿ ಪರಿಹಾರ, ಬೆಳೆವಿಮೆ ನೀಡಬೇಕು.
>
> **– ಚನ್ನಪ್ಪ ಷಣ್ಮುಕಿ,**
> ಸೋಮನಗೌಡ ಪಾಟೀಲ-ರೈತರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರೈತರ ಮುಂಗಾರಿನ ನೆಚ್ಚಿನ ಬೆಳೆ ಹೆಸರು ಬೆಳೆಯೂ ಇಲ್ಲದೆ, ಗುಣಮಟ್ಟದ ಕಾರಣದಿಂದ ಬೆಲೆಯೂ ಇಲ್ಲದ್ದರಿಂದ ಹೆಸರು ಬೆಳೆದ ರೈತರ ಬದುಕು ಹಸನಾಗದಂತಾಗಿದೆ.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಾದ ಸಕಾಲಿಕ ಮಳೆಗೆ ವಾಣಿಜ್ಯ ಬೆಳೆ ಹೆಸರು ಬಿತ್ತನೆ ಮಾಡಿ ಉತ್ತಮ ಬೆಳೆಯ ನಿರೀಕ್ಷೆಯಲ್ಲಿದ್ದರು.

> ಲಕ್ಷ್ಮೇಶ್ವರದ ಎಪಿಎಂಸಿಯಲ್ಲಿ ಇದುವರೆಗೂ ಕೇವಲ 12 ಸಾವಿರ ಕ್ವಿಂಟಲ್ ಹೆಸರು ಮಾರಾಟವಾಗಿದೆ. ಉತ್ತಮ ಗುಣಮಟ್ಟದ ಹೆಸರಿಗೆ 9 ಸಾವಿರ ಮೇಲ್ಪಟ್ಟು ದರವಿದೆ. ಆದರೆ ರೋಗಬಾಧೆ, ಅತಿಯಾದ ಮಳೆಗೆ ಸಿಲುಕಿದ ಹೆಸರು ಸಂಪೂರ್ಣ ಗುಣಮಟ್ಟ ಕುಸಿದಿದ್ದರಿಂದ ದರ ಕುಸಿತ ಕಂಡಿದೆ.
>
> **– ರುದ್ರಗೌಡ ಪಾಟೀಲ.**
> ಎಪಿಎಂಸಿ ಕಾರ್ಯದರ್ಶಿ, ಲಕ್ಷ್ಮೇಶ್ವರ.

ಉತ್ತಮವಾಗಿಯೇ ಬೆಳೆದ ಹೆಸರಿಗೆ ಹವಾಮಾನ ವೈಪರಿತ್ಯದಿಂದ ಹಳದಿ, ಬೂದುರೋಗ, ವಿಪರೀತ ಕೀಟಬಾಧೆ ಆವರಿಸಿತ್ತು. ನಿಯಂತ್ರಣಕ್ಕಾಗಿ ▸▸3ನೇ ಪುಟಕ್ಕೆ

> ಅತಿಯಾದ ಮಳೆಯಿಂದ ತಾಲೂಕಿನಾದ್ಯಂತ ಹೆಸರು ಸೇರಿ ಮುಂಗಾರಿನ ಎಲ್ಲ ಬೆಳೆಗಳು ಹಾನಿಗೀಡಾಗಿವೆ. ಈ ಬಗ್ಗೆ ಕೃಷಿ, ಕಂದಾಯ, ತೋಟಗಾರಿಕೆ ಸೇರಿ ಇಲಾಖೆಯಿಂದ ಜಂಟೀ ಸಮೀಕ್ಷಾ ಕಾರ್ಯ ನಡಿದಿದೆ. ವಸ್ತುಸ್ಥಿತಿ ವರದಿಯನ್ನು ಮತ್ತು ರೈತರು ಬೆಳೆವಿಮೆ, ಬೆಳೆಹಾನಿ ಪರಿಹಾರಕ್ಕೆ ಸಲ್ಲಿಸಿದ ಅಹವಾಲು, ಮನವಿಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗುವುದು.
>
> **– ಧನಂಜಯ ಎಂ.**
> ತಹಸೀಲ್ದಾರರು, ಲಕ್ಷ್ಮೇಶ್ವರ.

### ರಾಜ್ಯದಾದ್ಯಂತ ಜೆಡಿಎಸ್ ಮುಖಂಡರು, ಕಾರ್ಯಕರ್ತರು ಭಾಗಿ

# ಜೆಡಿಎಸ್‌ನಿಂದ ನಾಳೆ 'ಸತ್ಯಯಾತ್ರೆ'



**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಅಪಪ್ರಚಾರವನ್ನು ಖಂಡಿಸಿ, ಆಗಸ್ಟ್ 31ರಂದು ಜೆಡಿಎಸ್ ಪಕ್ಷದಿಂದ 'ಸತ್ಯ ಯಾತ್ರೆ' ಹಮ್ಮಿಕೊಳ್ಳಲಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ತಿಳಿಸಿದರು.

> ಧರ್ಮಸ್ಥಳದ ವಿರುದ್ಧ ಸಮೀರ್, ಚಿನ್ನಯ್ಯ, ತಿಮರೋಡಿ ಸೇರಿದಂತೆ ಅನೇಕರು ಷಡ್ಯಂತ್ರ ಮಾಡಿ ಕೆಟ್ಟ ಹೆಸರು ತರಲು ಪ್ರಯತ್ನಿಸುತ್ತಿದ್ದಾರೆ. ಆದರೆ, ಧರ್ಮಸ್ಥಳದಲ್ಲಿ ಧರ್ಮವಿದೆ ಮತ್ತು ವೀರೇಂದ್ರ ಹೆಗ್ಗಡೆಯವರ ಬೆಂಬಲಕ್ಕೆ ಜೆಡಿಎಸ್ ನಿಂತಿದೆ. ಅಪಪ್ರಚಾರ ಮಾಡುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಎಂ.ವೈ. ಮುಧೋಳ ಆಗ್ರಹಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಜಾತಿ, ಧರ್ಮ, ಪಕ್ಷವನ್ನು ಮೀರಿ ರಾಜ್ಯದ ಜನತೆ ಪೂಜಿಸುವ ಶ್ರೀಕ್ಷೇತ್ರ ಧರ್ಮಸ್ಥಳದ ಮೇಲೆ ನಡೆಯುತ್ತಿರುವ ಅಪಪ್ರಚಾರವನ್ನು ಪಕ್ಷವು ತೀವ್ರವಾಗಿ ಖಂಡಿಸುತ್ತದೆ. ಈ ಯಾತ್ರೆಯಲ್ಲಿ ರಾಜ್ಯದಾದ್ಯಂತ ಜೆಡಿಎಸ್ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಲಿದ್ದು, ಗದಗ ಜಿಲ್ಲೆಯಿಂದ ನೂರಾರು ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಈ ಯಾತ್ರೆಯು ಹಾಸನ ಜಿಲ್ಲೆಯ ಕದಲಿ ಗ್ರಾಮದಿಂದ ಬೆಳಿಗ್ಗೆ 11 ಗಂಟೆಗೆ ಹೊರಟು 12.30ಕ್ಕೆ ಧರ್ಮಸ್ಥಳ ತಲುಪಲಿದೆ. ಅಲ್ಲಿಂದ ದೇವಸ್ಥಾನದವರೆಗ ಪಾದಯಾತ್ರೆ ಮಾಡಲಾಗುವುದು. ಪ್ರಸ್ತುತ ನಡೆಯುತ್ತಿರುವ ಅಪಪ್ರಚಾರದ ಹಿಂದೆ ದೊಡ್ಡ ಷಡ್ಯಂತ್ರವಿದೆ. ಮುಖ್ಯಮಂತ್ರಿ ▸▸3ನೇ ಪುಟಕ್ಕೆ

## ಸಂಪಾದಕೀಯ

# ಕಾಂಗ್ರೆಸ್‌ಗೆ ತಿರುಗುಬಾಣವಾದ ಮತಗಳ್ಳತನದ ಆರೋಪ

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು 2024ರ ಲೋಕಸಭೆ ಚುನಾವಣೆಯಲ್ಲಿ ಮತಗಳ್ಳತನವಾಗಿದೆ ಎಂದು ಬಿಜೆಪಿ ಮತ್ತು ಚುನಾವಣಾ ಆಯೋಗದ ವಿರುದ್ಧ ಮಾಡಿರುವ ಗಂಭೀರ ಆರೋಪವು ತೀವ್ರ ರಾಜಕೀಯ ಚರ್ಚೆಗೆ ಕಾರಣವಾಗಿತ್ತು.

ಆದರೆ, ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಹಳೆಯ ಹೇಳಿಕೆಯೊಂದು ಕಾಂಗ್ರೆಸ್‌ಗೆ ತಿರುಗುಬಾಣವಾಗಿ ಮಾರ್ಪಟ್ಟಿದೆ. ಸಿದ್ದರಾಮಯ್ಯ ಅವರು 1991ರ ಕೊಪ್ಪಳ ಲೋಕಸಭೆ ಚುನಾವಣೆಯಲ್ಲಿ ಇದೇ ರೀತಿಯ ಮತಗಳ್ಳತನದಿಂದ ತಮಗೆ ಸೋಲುಂಟಾಗಿತ್ತು ಎಂದು ಹೇಳಿಕೆ ನೀಡಿರುವುದು ಬಿಜೆಪಿ ಪಾಲಿಗೆ ಹೊಸ ಅಸ್ತ್ರವಾಗಿ ಪರಿಣಮಿಸಿದೆ.

ಸಿದ್ದರಾಮಯ್ಯ ಅವರ ಈ ಹೇಳಿಕೆ, ಅಂದು ಜೆಡಿಎಸ್‌ನಿಂದ ಸ್ಪರ್ಧಿಸಿದ್ದ ಅವರನ್ನು ಕಾಂಗ್ರೆಸ್ ಪಕ್ಷವೇ ಮೋಸದಿಂದ ಸೋಲಿಸಿತ್ತೇ ಎಂಬ ಪ್ರಶ್ನೆಯನ್ನು ಹುಟ್ಟುಹಾಕಿದೆ. ಒಂದು ವೇಳೆ ಈ ಆರೋಪ ಸತ್ಯವಾಗಿದ್ದರೆ, ಕಾಂಗ್ರೆಸ್ ಕೂಡ ಈ ಹಿಂದೆ ಮತಗಳ್ಳತನದಂಥ ಕೃತ್ಯಗಳನ್ನು ನಡೆಸಿತ್ತೇ ಎಂಬ ಚರ್ಚೆಗಳು ಜೋರಾಗಿವೆ.

ಬಿಜೆಪಿ ಈ ವಿಷಯವನ್ನು ತೀವ್ರವಾಗಿ ಟೀಕಿಸುತ್ತಿದ್ದು, ಅಂದು ಜೆಡಿಎಸ್‌ನಿಂದ ಸ್ಪರ್ಧಿಸಿದ್ದ ನಿಮ್ಮನ್ನು ಕಾಂಗ್ರೆಸ್ ಮೋಸದಿಂದ ಸೋಲಿಸಿದೆ ಅಲ್ಲವೇ? ಎಂದು ನೇರವಾಗಿ ಸಿದ್ದರಾಮಯ್ಯ ಅವರನ್ನು ಪ್ರಶ್ನಿಸಿದೆ.

ಈ ಬೆಳವಣಿಗೆಯು ಕಾಂಗ್ರೆಸ್ ಪಕ್ಷದ ರಾಜಕೀಯ ತಂತ್ರದ ಮೇಲೆ ಗಂಭೀರ ಪರಿಣಾಮ ಬೀರಬಹುದು.

ಒಂದು ಕಡೆ, ರಾಹುಲ್ ಗಾಂಧಿ ಅವರು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ಬಗ್ಗೆ ಮಾತನಾಡುತ್ತಿದ್ದರೆ, ಮತ್ತೊಂದೆಡೆ ಸ್ವತಃ ಅವರ ಪಕ್ಷದ ನಾಯಕರೊಬ್ಬರು ಅದೇ ಪಕ್ಷದ ವಿರುದ್ಧ ಇಂತಹ ಆರೋಪ ಮಾಡಿರುವಂತಾಗಿದೆ.

ಸಿದ್ದರಾಮಯ್ಯ ಅವರ ಹೇಳಿಕೆ, ರಾಹುಲ್ ಗಾಂಧಿಯವರ ಆರೋಪಗಳ ವಿಶ್ವಾಸಾರ್ಹತೆಯನ್ನೇ ಪ್ರಶ್ನಿಸುವಂತಿದೆ.

ರಾಜಕೀಯವಾಗಿ ಇದು ಬಿಜೆಪಿಗೆ ದೊಡ್ಡ ಲಾಭ ತಂದುಕೊಡಲಿದ್ದು, ಕಾಂಗ್ರೆಸ್ ತನ್ನದೇ ಮನೆಯಲ್ಲಿ ಎದುರಿಸುತ್ತಿರುವ ಆಂತರಿಕ ಸಂಘರ್ಷಗಳು ಮತ್ತು ಗೊಂದಲಗಳನ್ನು ಇದು ಮತ್ತಷ್ಟು ಎದ್ದು ಕಾಣುವಂತೆ ಮಾಡಿದೆ.

### ಶಿಕ್ಷಣ, ಪುಸ್ತಕ ದಾಸೋಹಿ ಎಂ.ಎ. ಹಂಚಿನಾಳ ಗುರುಗಳ ಸ್ಮರಣೆಯ ನಿಮಿತ್ತ ಲೇಖನ

# ಆಧ್ಯಾತ್ಮಿಕ ಚಿಲುಮೆ ಹಂಚಿನಾಳ ಗುರುಗಳು



ಸಕಲ ಜೀವಿಗಳಿಗೂ ಲೇಸನ್ನೆ ಬಯಸುವ ಬಸವತತ್ವ ನಿಷ್ಠವಾದ ಮಠಮಾನ್ಯಗಳಲ್ಲಿ ಜಗದ್ಗುರು ತೋಂಟದಾರ್ಯ ಮಠವು ಒಂದು. ಬಸವದಳ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ ಹೀಗೆ ವಿವಿಧ ಸಂಘಟನೆಗಳ ಮೂಲಕ ಭಕ್ತರನ್ನು ಒಗ್ಗೂಡಿಸಿ ಸಮಾಜದ ಏಳ್ಗೆಗಾಗಿ ಶಿಕ್ಷಣ ದಾಸೋಹ, ಪುಸ್ತಕ ದಾಸೋಹಗಳ ಮೂಲಕ ಸಮಾಜಕ್ಕೆ ಬೆಳಕಾದವರು ಲಿಂಗೈಕ್ಯ ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು.

ಅವರ ಆಪ್ತವಲಯದ ಶಿಷ್ಯರಲ್ಲಿ ಗುರುತಿಸಿಕೊಂಡವರು ಎಂ.ಎ. ಹಂಚಿನಾಳ ಗುರುಗಳು. ಎಲ್ಲಾ ಕಾರ್ಯಕ್ರಮಗಳಲ್ಲಿ ಸಕ್ರಿಯ ಪಾತ್ರ ವಹಿಸುವ ಹಿರಿಯ ಶರಣರೆಂದೇ ಖ್ಯಾತಿ ಪಡೆದಿದ್ದ ಇವರು ನಮ್ಮನೆಲ್ಲ ಅಗಲಿ 9 ವರ್ಷಗಳು ಗತಿಸಿವೆ. ಹಂಚಿನಾಳ ಗುರುಗಳು ದೈಹಿಕವಾಗಿ ನಮ್ಮೊಂದಿಗೆ ಇಲ್ಲದಿದ್ದರೂ ಅವರ ಪ್ರಾಮಾಣಿಕ ವ್ಯಕ್ತಿತ್ವ ಹಾಗೂ ನಿರಪೇಕ್ಷೆಯ ಸಾಧನೆ, ಶರಣತತ್ವ ಪ್ರಸಾರಕರಾಗಿ ನಮ್ಮ ಮನದಾಳದಲ್ಲಿ ಚಿರಸ್ಥಾಯಿ ಸ್ಥಾನ ಪಡೆದಿದ್ದಾರೆ.

ಹಂಚಿನಾಳ ಮಾಸ್ತರರೆಂದೇ ಗದಗ ಪರಿಸರದಲ್ಲಿ ಖ್ಯಾತರಾಗಿದ್ದ ಇವರ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಚಿಕ್ಕಪಡಸಲಗಿ ಗ್ರಾಮದವರು. ಬಾಲ್ಯದಿಂದಲೇ ಶರಣರ ವಚನಗಳನ್ನು ಕೇಳುತ್ತಾ, ಹಾಡುತ್ತಾ ಬೆಳೆದ ಇವರು ಶರಣತತ್ವಗಳನ್ನು ತಮ್ಮ ಬದುಕಿನುದ್ದಕ್ಕೂ ಅಳವಡಿಸಿಕೊಂಡವರು. ಕನ್ನಡದಲ್ಲಿ ಎಂ.ಎ ಸ್ನಾತಕೋತ್ತರ ಪದವಿ ಪಡೆದ ನಿಗರ್ವಿ ಹಂಚಿನಾಳ ಗುರುಗಳು ಪ್ರಾಥಮಿಕ ಶಾಲಾ ಶಿಕ್ಷಕರಾಗಿ ಅನೇಕ ವಿದ್ಯಾರ್ಥಿಗಳ ಬಾಳಿಗೆ ಬೆಳಕಾದವರು. ಗದಗ ಶಹರ, ಧಾರವಾಡ, ಅಸುಂಡಿಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿ ಮುಖ್ಯೋಪಾಧ್ಯಾಯರಾಗಿ ಪದೋನ್ನತಿ ಹೊಂದಿ ತದನಂತರ ಸೇವಾ ನಿವೃತ್ತಿಗೊಂಡರು.

ಮೊದಲಿನಿಂದಲೂ ಬರವಣಿಗೆ ಹಾಗೂ ಓದಿನಲ್ಲಿ ಆಸಕ್ತಿ ಹೊಂದಿದ್ದ ಇವರು ಅನೇಕ ಪುಸ್ತಕಗಳನ್ನು, ಕವನಗಳನ್ನು ರಚಿಸುವುದರ ಮೂಲಕ ಸಾಹಿತಿಗಳಾದವರು. ಶರಣ ತತ್ವ ದರ್ಶನ ಮಾಡಿಸುವ ಪ್ರವಚನಕಾರರಾಗಿ, ಜನಪ್ರಿಯ ಕಾರ್ಯಕ್ರಮ ನಿರೂಪಕರಾಗಿ ಸಲ್ಲಿಸಿದ ಸೇವೆ ಅವಿಸ್ಮರಣೀಯ. ತೋಂಟದಾರ್ಯ ಜಾತ್ರೆಯ ನಿಮಿತ್ತ ನಡೆಯುತ್ತಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮಗಳನ್ನು ಬಸವತತ್ವದ ಪ್ರಕಾರ ಸರಳವಾಗಿ ಅರ್ಥಪೂರ್ಣವಾಗಿ ಆಚರಿಸುವಲ್ಲಿ ಇವರ ಪರಿಶ್ರಮ ಚಿರಸ್ಮರಣೀಯ. ಜನಸಾಮಾನ್ಯರ ಮನೆ ಮನೆಗಳಿಗೆ ತೆರಳಿ ಮನೆಯಲ್ಲಿ ಮಹಾಮನೆ ಕಾರ್ಯಕ್ರಮದ ಮೂಲಕ ಶರಣರ ತತ್ವಗಳ ಪ್ರಸಾರದ ಕೆಲಸಕ್ಕೆ ರೂವಾರಿಗಳಾದವರು.

ಪೂಜ್ಯ ಲಿಂ ಸಿದ್ದಲಿಂಗ ಮಹಾಸ್ವಾಮಿಗಳ ಪ್ರೋತ್ಸಾಹದಲ್ಲಿ ಬಸವಣ್ಣವರ ಕುರಿತಾಗಿ ರಚಿಸಿದ ಬಾಲಬಸವ ಸರಣಿ 1, 2, 3, 4 ಪುಸ್ತಕಗಳನ್ನು ಶ್ರೀ ಮಠದಿಂದ ಪ್ರಕಟಿಸಿದರು. ಶ್ರೀಮಠದ ಸಾವಿರ ಶಿವಾನುಭವ, ಪೂಜ್ಯರ ಪಟಾಭಿಷೇಕದ ರಜತಮಹೋತ್ಸವದ ಸಂದರ್ಭದಲ್ಲಿ ಗುರುಗಳ ಸೇವೆಯಲ್ಲಿ ತನು-ಮನದೊಂದಿಗೆ ಸಮರ್ಪಿಸಿಕೊಂಡ ಅವರ ನೆನಹು ಚಿರಸ್ಥಾಯಿಯಾಗಿದೆ. ಇಷ್ಟೇ ಅಲ್ಲದೆ ಇವರ ಹುಟ್ಟೂರಾದ ಚಿಕ್ಕಪಡಸಲಗಿಗೆ ಪೂಜ್ಯರನ್ನು ಕರೆದುಕೊಂಡು ಹೋಗಿ ಅಲ್ಲಿ ಪ್ರೌಢಶಾಲೆ ನಿರ್ಮಾಣಕ್ಕೆ ಕಾರಣೀಕರ್ತರಾಗುವುದರ ಮೂಲಕ ಇಂದು ತಮ್ಮ ಊರಿನಲ್ಲಿ ಪ್ರಾಥಮಿಕ, ಪ್ರೌಢಶಾಲೆ ಹೆಮ್ಮರವಾಗಿ ಬೆಳೆದು ಸಾವಿರಾರು ಮಕ್ಕಳ ಶಿಕ್ಷಣಕ್ಕೆ ರೂವಾರಿಗಳಾದವರು. ತೋಂಟದಾರ್ಯ ಸಂಸ್ಥೆಗಾಗಿ 45 ವರ್ಷಗಳ ಕಾಲ ಅವಿರತವಾಗಿ ಶ್ರಮಿಸಿದವರು.

ಲಿಂಗಾಯತ ಪ್ರಗತಿಶೀಲ ಸಂಘ, ಬಸವಕೇಂದ್ರದ ಅಧ್ಯಕ್ಷರಾಗಿ ಹಾಗೂ ಜ. ತೋ. ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾಗಿ, ನಿಷ್ಫಲವಾಗಿ ಸೇವೆ ಸಲ್ಲಿಸಿದವರು. ಆಧ್ಯಾತ್ಮಿಕ ಚಿಲುಮೆಯಂತಿದ್ದ ಇವರು ಅನೇಕ ಸ್ವಾಮೀಜಿಗಳೊಂದಿಗೆ ನಿಕಟವರ್ತಿಗಳಾಗಿದ್ದರು. ಜಗದ್ಗುರು ತೋಂಟದಾರ್ಯ ಮಠದ ಈಗಿನ ಪೂಜ್ಯರಾದ ಡಾ. ಸಿದ್ಧರಾಮ ಮಹಾಸ್ವಾಮಿಗಳಿಗೆ ಅತ್ಯಂತ ಪರಿಚಿತರಾಗಿದ್ದ ಇವರು ಶರಣ ಸದೃಶವಾದ ವ್ಯಕ್ತಿತ್ವ ಸಾಧನೆಯ ಮೂಲಕ ಇಂದಿಗೂ ಸ್ಮೃತಿಪಟಲದಲ್ಲಿ ಅಚ್ಚಳಿಯದಂತೆ ಇದ್ದಾರೆ. ಇವರು ಧರಿಸುತ್ತಿದ್ದ ಶ್ವೇತವರ್ಣದ ಉಡುಪು ನಿಜಶರಣರ ಭಾವವನ್ನು ಮೂಡಿಸುತ್ತಿತ್ತು. ಇವರು 30-8-2015ರಂದು ಲಿಂಗೈಕ್ಯರಾಗಿ, ಇಂದಿಗೆ 10 ವರ್ಷಗಳು ಗತಿಸಿದವು. ದೈಹಿಕವಾಗಿ ನಮ್ಮನ್ನಗಲಿದರೂ ಅವರ ಧ್ಯೇಯಾದರ್ಶಗಳನ್ನು ಸ್ಮರಿಸುತ್ತಾ ಆ.30ರಂದು ಅವರ ಸ್ಮರಣೋತ್ಸವ ಅವರ ಸ್ವಗೃಹದಲ್ಲಿ ಹಮ್ಮಿಕೊಳ್ಳಲಾಗಿದೆ. ಬಸವಾದಿ ಶರಣರು ಚಿರಶಾಂತಿಯ ಮಹಾಬೆಳಗನ್ನು ಕರುಣಿಸಲಿ ಎಂದು ಪ್ರಾರ್ಥಿಸೋಣ.

**- ಕೆ.ಆರ್. ದೊಡ್ಡಮನಿ, ಡಂಬಳ.**



ಶಿರಸಿಯಲ್ಲಿ ತಯಾರಿಸಿದ ಶ್ರೀ ಗಣೇಶ ಮೂರ್ತಿಯನ್ನು ಗದಗ ನಗರದ ಮುಳಗುಂದ ನಾಕಾದಲ್ಲಿರುವ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ನಾರಾಯಣಸಾ ಹಬೀಬ್ ತಮ್ಮ ಮನೆಯಲ್ಲಿ ಪ್ರತಿಷ್ಠಾಪಿಸಿದರು. ಈ ಸಂದರ್ಭದಲ್ಲಿ ನಾರಾಯಣಸಾ ಹಬೀಬ್, ವಿನಾಯಕ್ ಹಬೀಬ್, ಶ್ರೀನಿವಾಸ್ ಹಬೀಬ್, ಕಿರಣ್ ಹಬೀಬ್, ವೆಂಕಟೇಶ್ ಹಬೀಬ, ನೀತು, ವರ್ಷ, ವಾಣಿಶ್ರೀ, ಕೋಮಲ್, ಅಥರ್ವ, ಅನನ್ಯ, ವಿಹಾನ್, ರಿತಿಕಾ, ವೈಭವ್ ಮತ್ತು ಹಬೀಬ್ ಪರಿವಾರದವರು ಉಪಸ್ಥಿತರಿದ್ದರು.

# ಸಿಟ್ಟಿಂಗ್ ಥ್ರೋ ಬಾಲ್‌ಗೆ ಆಯ್ಕೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ತಮಿಳುನಾಡು, ಕೊಯಿಮತ್ತೂರಿನಲ್ಲಿ ಆಗಸ್ಟ್ 29ರಿಂದ 31ರವರೆಗೆ ನಡೆಯಲಿರುವ 4ನೇ ರಾಷ್ಟ್ರಮಟ್ಟದ ವಿಕಲಚೇತನರ ಸಿಟ್ಟಿಂಗ್ ಥ್ರೋ ಬಾಲ್ ಕ್ರೀಡಾಕೂಟಕ್ಕೆ ಗದಗ ಜಿಲ್ಲೆಯಿಂದ 5 ಜನ ಕರ್ನಾಟಕ ತಂಡಕ್ಕೆ ಆಯ್ಕೆಯಾಗಿದ್ದಾರೆ.ಮಹಾಂತೇಶ್ ಬೇವೂರ್, ಖಾಜಾಹುಸೇನ್ ಕಾತರಕಿ, ಸೋಮಶೇಖರ ಬಿಚಗಲ್ಲ, ಆನಂದ್ ಬೇಂದ್ರೆ ಮತ್ತು ಮಾಲತಿ ಇನಾಮತಿ ಅವರು ತಂಡಕ್ಕೆ ಆಯ್ಕೆಯಾಗಿದ್ದು, ಜೆ.ಎಮ್.ಜೆ ವರ್ಲ್ಡ್ ಸ್ಪೋರ್ಟ್ಸ್ ಕ್ಲಬ್‌ನ ಮುಖ್ಯ ತರಬೇತುದಾರ ರಿಚರ್ಡ್ ಧರ್ಮದಾಸ ತರಬೇತಿ ನೀಡಿದ್ದರು. ಗದಗ, ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಚರ್ಮರೋಗ ತಜ್ಞ ಡಾ. ತುಕಾರಾಮ ಸೂರಿ ಕ್ರೀಡಾಪಟುಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಸಂಭ್ರಮದ ಗಣೇಶ ಚತುರ್ಥಿ ಆಚರಣೆ











**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಂಗಾರಿನ ಬೆಳೆಹಾನಿಯಿಂದ ಸಂಕಷ್ಟದ ನಡುವೆಯೂ ರೈತರೂ ಸೇರಿದಂತೆ ಜನಸಮುದಾಯವೆಲ್ಲ ಬುಧವಾರ ಸಂಕಷ್ಟ ನಿವಾರಕ, ವಿಘ್ನನಾಶಕನ ಗಣೇಶ ಚತುರ್ಥಿ ಹಬ್ಬವನ್ನು ಸಾಂಪ್ರದಾಯದಂತೆ ಸಂಭ್ರಮದಿಂದಲೇ ಆಚರಿಸಿದರು.

ಲಕ್ಷ್ಮೇಶ್ವರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಗಣಪತಿ ಮೂರ್ತಿಯನ್ನು ಸಡಗರ ಸಂಭ್ರಮದಿಂದ ಬರಮಾಡಿಕೊಂಡು ಶ್ರದ್ಧಾ ಭಕ್ತಿಯಿಂದ ಪ್ರತಿಷ್ಠಾಪಿಸಲಾಯಿತು. ಶಿಗ್ಲಿ, ಆದರಹಳ್ಳಿ, ಸೂರಣಗಿ, ಬಾಲೆಹೊಸೂರು, ರಾಮಗೇರಿ ಗ್ರಾಮಗಳಲ್ಲಿ ಗೌರಿಗಣೇಶನ ಹಬ್ಬ ಕಳೆಗಟ್ಟಿತ್ತು. ತಾಲೂಕಿನ ಶಿಗ್ಲಿಯ ಎಸ್.ಎಸ್. ಕೂಡ್ಲಮಠ ಪ್ರೌಢಶಾಲೆಯ ಮಕ್ಕಳು ಜನಪದ ಹಾಡುಗಳಿಗೆ ತಕ್ಕಂತೆ ಹೆಜ್ಜೆ ಹಾಕಿ ಕುಣಿಯುತ್ತ ಗಣೇಶನನ್ನು ಮೆರವಣಿಗೆ ಮೂಲಕ ಶಾಲೆಗೆ ಕರೆತಂದರು. ಬೆಲೆ ಏರಿಕೆಯ ನಡುವೆಯೂ ಹಬ್ಬಕ್ಕಾಗಿ ಪಟ್ಟಣದ ಮಾರ್ಕೆಟ್‌ನಲ್ಲಿ ಗಣೇಶ ಮೂರ್ತಿ, ಹೂವು, ಹಣ್ಣು, ತಳಿರು-ತೋರಣ, ದಿನಸಿ, ಪಟಾಕಿ, ಅಲಂಕಾರಿಕ ಮತ್ತು ಅಗತ್ಯ ವಸ್ತುಗಳ ಖರೀದಿಯಲ್ಲಿ ತೊಡಗಿದ್ದು ಕಂಡು ಬಂದಿತು. ಬಹುತೇಕ ಸಾರ್ವಜನಿಕರು ಈ ವರ್ಷ ತಮ್ಮ ಮನೆಯಲ್ಲಿ ಪರಿಸರ ಸ್ನೇಹಿ ಗಣೇಶನನ್ನು ಪ್ರತಿಷ್ಠಾಪಿಸಿದ್ದು ಕಂಡುಬಂದಿತು. ಸಾರ್ವಜನಿಕ ಗಣೇಶೋತ್ಸವ ಸಂಘಟನೆಯವರು ನಾ ಮುಂದು ತಾ ಮುಂದು ಎಂಬಂತೆ ಅಬ್ಬರದ ಡಿಜೆ ಸೌಂಡ್‌ನೊಂದಿಗೆ ಗಣೇಶ ಪ್ರತಿಷ್ಠಾಪನೆ ಮಾಡಿದರು.

ಲಕ್ಷ್ಮೇಶ್ವರದ ಭಾನು ಮಾರ್ಕೆಟ್, ತೇರಿನ ಮನೆ ಆವರಣ, ರಾಘವೇಂದ್ರ ಸ್ವಾಮಿಗಳ ಮಠ, ಹಳ್ಳದಕೇರಿ, ಡಾ. ಬಿ.ಆರ್. ಅಂಬೇಡ್ಕರ್ ನಗರ, ಸೊಪ್ಪಿನಕೇರಿ, ಕದರಗೇರಿ ಸೇರಿ 21 ಸಾರ್ವಜನಿಕ ಸ್ಥಳಗಳಲ್ಲಿ ಬೃಹತ್ ಮೂರ್ತಿಗಳನ್ನು ಮೆರವಣಿಗೆ ಮೂಲಕ ಕರೆತಂದು ಪ್ರತಿಷ್ಠಾಪಿಸಲಾಯಿತು. ಗುರುವಾರ ಗಣಪನ ವಾಹನವಾದ ಮೂಷಿಕನ ಪೂಜೆ ನಡೆಯಿತು. ಎಲ್ಲರ ಮನೆಗಳಲ್ಲಿ ಕರಿಗೆಡುಬು ಸಿದ್ಧಪಡಿಸಿ ಇಲಿಗೆ ನೈವೇದ್ಯ ಮಾಡಲಾಯಿತು.

# ಶಾಲಾ-ಕಾಲೇಜುಗಳಲ್ಲಿ ನೈತಿಕ ಮೌಲ್ಯದ ಶಿಕ್ಷಣ ನೀಡಿ; ಶಹಜಾನ್ ಮುದಕವಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಶಾಲಾ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ನೈತಿಕ ಮೌಲ್ಯ, ಸೈದ್ಧಾಂತಿಕವಾದ ಶಿಕ್ಷಣ ಇಲ್ಲದಂತಾಗಿದೆ ಎಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಸಹಾಯಕ ಉಪಕುಲಸಚಿವ ಶಹಜಾನ್ ಮುದಕವಿ ವಿಷಾದ ವ್ಯಕ್ತಪಡಿಸಿದರು.

ನಗರದ ಪಂಚಾಚಾರ್ಯ ಜಗದ್ಗುರು ವೇದ ಸಂಸ್ಕೃತ ಪಾಠಶಾಲೆಯಲ್ಲಿ ಕಪ್ಪತ್ತಗಿರಿ ಫೌಂಡೇಶನ್ ರಾಜ್ಯ ಸಮಿತಿ ಏರ್ಪಡಿಸಿದ್ದ ವಚನ ಸಂಜೆ ಹಾಗೂ ಜಾನಪದ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳಿಗೆ ಸಂಸ್ಕೃತಿ ಕೊಡುವ ಮೌಲ್ಯಗಳನ್ನು ಕೊಟ್ಟಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದು ಶಹಜಾನ್ ಮುದಕವಿ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಪ್ಪತ್ತಗಿರಿ ಫೌಂಡೇಶನ್ ಸಂಸ್ಥಾಪಕರಾದ ಚಂದ್ರಕಲಾ ಇಟಗಿಮಠ ಮಾತನಾಡಿ, ನಮ್ಮ ಫೌಂಡೇಶನ್ ವತಿಯಿಂದ ಈಗಾಗಲೇ ಕಳಸಾಪೂರ ಗ್ರಾಮದಲ್ಲಿ ಜಾನಪದ ವಿಶ್ವವಿದ್ಯಾಲಯದಿಂದ ಮಾನ್ಯತೆ ಪಡೆದು ಡಿಪ್ಲೋಮಾ ಹಾಗೂ ಸರ್ಟಿಫಿಕೇಟ್ ಕೋರ್ಸ್‌ಗಳನ್ನು ಆರಂಭಿಸಿಲಾಗಿದ್ದು ಅದರ ಸದುಪಯೋಗ ಪಡಿಸಿಕೊಳ್ಳಲು ಮನವಿ ಮಾಡಿದರು. ಅಷ್ಟೇ ಅಲ್ಲದೆ ಸಾರ್ವಜನಿಕರ ಸಹಕಾರದಿಂದ ಜಾನಪದ ಕಲೆಯನ್ನು ಉಳಿಸುವ ಕೆಲಸ ಮಾಡಲಾಗುತ್ತದೆ ಎಂದರು.

ಜಾನಪದ ಕಲಾವಿದ ವೀರಣ್ಣ ಅಂಗಡಿ, ವಿಶ್ರಾಂತ ಕನ್ನಡ ಪ್ರಾಧ್ಯಾಪಕರಾದ ಶಕುಂತಲಾ ಸಿಂಧೂರ, ಗಣ್ಯರಾದ ಶರದ್‌ರಾವ ಹುಯಿಲಗೋಳ, ಜನಪದ ಹಾಗೂ ಜಾನಪದ ನಡುವಿನ ವ್ಯತ್ಯಾಸದ ಬಗ್ಗೆ ಮಾತನಾಡಿ, ಜನಪದ ಉಳಿವಿಗಾಗಿ ಇಂದಿನ ಯುವ ಪೀಳಿಗೆ ಮುಂದಾಗಬೇಕು ಎಂದರಲ್ಲದೇ, ಕಪ್ಪತ್ತಗಿರಿ ಫೌಂಡೇಶನ್ ಕಾರ್ಯವೈಖರಿಗೆ ಪ್ರಶಂಸೆ ವ್ಯಕ್ತಪಡಿಸಿದರು.ವೇದಿಕೆಯಲ್ಲಿ ವಿಶ್ರಾಂತ ಪ್ರಾಚಾರ್ಯ ಶಂಕ್ರಪ್ಪ ಗಾಂಜಿ, ಹಿರಿಯ ಸಾಹಿತಿ ಎ ಎಸ್ ಮಕಾನದಾರ, ಸಿ.ಬಿ ಪಲ್ಲೇದ, ಸ್ಪಂದನ ಸಂಸ್ಥೆಯ ಎಮ್ ಜಿ ಖಂಡಮ್ಮನವರ್ ಇದ್ದರು. ಕಾರ್ಯಕ್ರಮದ ಸಾನಿಧ್ಯವನ್ನು ಗುರುಸಿದ್ದಯ್ಯಸ್ವಾಮಿ ಹಿರೇಮಠ ವಹಿಸಿದ್ದರು.

ವಚನ ಗೋಷ್ಠಿಯಲ್ಲಿ ಶಿಲ್ಪಾ ಮ್ಯಾಗೇರಿ, ಶಿವಲೀಲಾ ಧನ್ನಾ, ನೀಲಮ್ಮ ಅಂಗಡಿ, ಅನಸೂಯಾ ಮಿಟ್ಟಿ, ಮಹಾಂತೇಶ್ ಬೆರಗಣ್ಣವರ, ನಾಗರತ್ನ ಹೊಸಮನಿ, ಲಕ್ಷ್ಮಿ ಕೋಡಿಹಳ್ಳಿ ಭಾಗವಹಿಸಿದ್ದರು.

### ಶಿವಾನುಭವಗೋಷ್ಠಿಯಲ್ಲಿ ವಿಶೇಷ ಉಪನ್ಯಾಸ ನೀಡಿದ ಶಿಕ್ಷಕಿ ಪ್ರತಿಭಾ ಗಾಣಿಗೇರ

# ಅಂತರಂಗದ ಸೌಂದರ್ಯ ಮುಖ್ಯ

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಹಿಳೆಗೆ ಬಾಹ್ಯ ಸೌಂದರ್ಯಕ್ಕಿಂತ ಅಂತರಂಗದ ಸೌಂದರ್ಯ ಬಹಳಷ್ಟು ಮುಖ್ಯ. ಬಾಹ್ಯ ಸೌಂದರ್ಯ ಸರಿಯಿಲ್ಲವೆಂದು ಖಿನ್ನತೆಗೆ ಒಳಗಾಗದೆ, ಅಂತರಂಗದ ಸೌಂದರ್ಯವನ್ನು ಬೆಳೆಸಿಕೊಂಡು ಮುನ್ನಡೆದರೆ ಆಕೆ ಸಮಾಜದಲ್ಲಿ ಉನ್ನತ ಸ್ಥಾನಮಾನಗಳನ್ನು ಪಡೆಯುತ್ತಾಳೆ ಎಂದು ಶಿಕ್ಷಕಿ ಪ್ರತಿಭಾ ಗಾಣಿಗೇರ ಹೇಳಿದರು.

ಕೋಡಿಕೊಪ್ಪದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ಬುಧವಾರ ಸಂಜೆ ನಡೆದ ಶಿವಾನುಭವಗೋಷ್ಠಿ-65ರಲ್ಲಿ ಅವರು 'ಸಮಾಜದಲ್ಲಿ ಮಹಿಳೆಯ ಸ್ಥಾನಮಾನ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಮಹಿಳೆ ತನಗೆ ನೀಡಿದ ಕಾರ್ಯವನ್ನು ನಿಷ್ಠೆಯಿಂದ



ಮಾಡುವುದರಿಂದ ಸಮಾಜದಲ್ಲಿ ಆಕೆಗೆ ವಿಶೇಷ ಸ್ಥಾನವಿದೆ. ಅನುಕೂಲಕರ ಪ್ರೋತ್ಸಾಹ ಸಿಕ್ಕರೆ ಆಕೆ ಏನನ್ನಾದರೂ ಸಾಧಿಸಬಲ್ಲಳು. ಅದಕ್ಕೆ ಪುರುಷರ ಸಹಕಾರವೂ ಬೇಕು. ಭಾರತದ ಮಹಿಳೆಯರಲ್ಲಿ ಸಂಸ್ಕಾರ, ಅತಿಥಿ ಸತ್ಕಾರಗಳು ಹಾಸುಹೊಕ್ಕಾಗಿವೆ. ಆಕೆಗೆ ಎಷ್ಟೇ ಅಡೆತಡೆಗಳಿದ್ದರೂ ಸಾಧಿಸುವ ಛಲವಿರುತ್ತದೆ. ಅನ್ನದಾನೇಶ್ವರ ಶಿಕ್ಷಣ ಸಂಸ್ಥೆ ಅಕ್ಷರದ ಜ್ಞಾನದೊಂದಿಗೆ ಹೊಟ್ಟೆಗೆ ಅನ್ನ ಮತ್ತು ತಲೆಗೆ ಅಕ್ಷರವನ್ನು ನೀಡಿ ಬಹಳಷ್ಟು ಜನರ ಬಾಳಿನಲ್ಲಿ ಬೆಳಕು ಮೂಡಿಸಿದೆ ಎಂದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ನಮ್ಮ ಜೀವನದ ಪ್ರತಿ ಕ್ಷಣವೂ ಅಮೂಲ್ಯವಾಗಿದೆ.

> ನಮ್ಮಲ್ಲಿ ಅಂತರಂಗದ ಸೌಂದರ್ಯ ಹೆಚ್ಚಾಗಲು ಇಂತಹ ಶಿವಾನುಭವಗೋಷ್ಠಿಗಳು ಸಹಕಾರಿಯಾಗಿವೆ. ಇಲ್ಲಿ ಬರುವ ಅನುಭಾವಿಗಳ ಅನುಭವದ ಮಾತುಗಳು ನಮ್ಮಲ್ಲಿನ ದೋಷಗಳನ್ನು ಹೊಡೆದೋಡಿಸಿ ಜ್ಞಾನದ ಬೆಳಕನ್ನು ನೀಡಲು ಸಹಾಯಕವಾಗುತ್ತವೆ. ಆದ್ದರಿಂದ ಶಿವಾನುಭವದ ಅನುಭವವನ್ನು ನೀವೆಂದಿಗೂ ತಪ್ಪಿಸಿಕೊಳ್ಳಬಾರದು ಎಂದು ಪ್ರತಿಭಾ ಗಾಣಿಗೇರ ಹೇಳಿದರು.

ಏನೇ ಕನಸು ನನಸಾಗಬೇಕಾದರೂ ಅದಕ್ಕೆ ಸತತ ಪ್ರಯತ್ನ, ಪ್ರಾಮಾಣಿಕ ಪರಿಶ್ರಮ ಬೇಕು. ಇದು ದೊರಕಬೇಕಾದರೆ ಜ್ಞಾನ ಬೇಕು. ಜ್ಞಾನದಿಂದ ಕಾರ್ಯ ಮಾಡುವ ಮನುಷ್ಯ ಎಂದಿಗೂ ಸಶಕ್ತನಾಗಿರುತ್ತಾನೆ.

ಸಣ್ಣ ಮನಸ್ಸನ್ನು ಹೊಂದಿದವರು ಜೀವನದಲ್ಲಿ ಎಂದಿಗೂ ಮುಂದೆ ಬರಲು ಸಾಧ್ಯವಿಲ್ಲ. ಆದ್ದರಿಂದ ಎಂದಿಗೂ ಉದಾರ ಮನಸ್ಸನ್ನು ಹೊಂದಿ, ಎಲ್ಲರೊಡನೆ ಹೊಂದಿಕೆಯಿಂದ ಬಾಳುವ ಗುಣವನ್ನು ಬೆಳೆಸಿಕೊಳ್ಳಲೆಂದೇ ಶಿವಾನುಭವ ನಡೆಸಲಾಗುತ್ತಿದೆ. ಇದರ ಪ್ರಯೋಜನವನ್ನು ಎಲ್ಲರೂ ಪಡೆದುಕೊಳ್ಳಬೇಕೆಂದರು.

ಆಡಳಿತಾಧಿಕಾರಿ ಎನ್.ಆರ್. ಗೌಡರ, ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ, ಉಪನ್ಯಾಸಕ ಎಫ್.ಎನ್. ಹುಡೇದ, ಪತ್ರಕರ್ತ ಪ್ರಭುಸ್ವಾಮಿ ಅರವಟಗಿಮಠ ಮುಂತಾದವರಿದ್ದರು.

# ಮುಲ್ಲಾನ ಬಾವಿ ಶುಚಿಗೊಳಿಸಿದ ಪುರಸಭೆ ಸಿಬ್ಬಂದಿ



**■ ವಿಜಯಸಾಕ್ಷಿ ಸುದ್ದಿ, ರೋಣ**

ಪಟ್ಟಣದ ಜಕ್ಕಲಿ ಕ್ರಾಸ್ ಬಳಿ ಇರುವ ಮುಲ್ಲಾನ ಭಾವಿಯನ್ನು ಗಣೇಶ ವಿಸರ್ಜನೆ ನಿಮಿತ್ತ ಪುರಸಭೆಯ ಪೌರ ಕಾರ್ಮಿಕರು ಬುಧವಾರ ಶುಚಿಗೊಳಿಸಿ, ಹೊಸ ನೀರು ತುಂಬಿಸಿದರು. ಪಟ್ಟಣದ ಮನೆಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಪೂಜೆಗೊಳ್ಳುವ ವಿಘ್ನ ನಿವಾರಕನನ್ನು ವಿಸರ್ಜನೆ ಮಾಡಲು ಮುಲ್ಲಾನ ಭಾವಿ ಪ್ರಾಮುಖ್ಯತೆಯನ್ನು ಪಡೆದಿದೆ. ವಿಘ್ನ ನಿವಾರಕನ ಸಾವಿರಾರು ಭಕ್ತರು ಇದೇ ಬಾವಿಯಲ್ಲಿ ತಾವು ಪೂಜಿಸಿದ ವಿನಾಯಕನನ್ನು ವಿಸರ್ಜಿಸುತ್ತಾರೆ. ಅಲ್ಲದೆ ಸಾರ್ವಜನಿಕವಾಗಿ ಪ್ರತಿಷ್ಠಾಪಿಸಲ್ಪಡುವ ಗಣೇಶ ಮೂರ್ತಿಗಳನ್ನು ಇದೇ ಭಾವಿಯಲ್ಲಿ ವಿಸರ್ಜನೆ ಮಾಡಲಾಗುತ್ತದೆ.

ಪುರಸಭೆಯ ಉಪಾಧ್ಯಕ್ಷರು ಈ ಬಗ್ಗೆ ಮಾಹಿತಿ ನೀಡಿ, ರೋಣದ ಮುಲ್ಲಾನ ಭಾವಿ ತನ್ನದೇ ಆದ ಇತಿಹಾಸ ಹೊಂದಿದ್ದು, ಪಟ್ಟಣದ ಮನೆಗಳಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಷ್ಠಾಪಿಸಿದ ಗಣಪತಿ ಮೂರ್ತಿಗಳನ್ನು ಇದೇ ಬಾವಿಯಲ್ಲಿ ವಿಸರ್ಜನೆ ಮಾಡುವ ಪದ್ಧತಿಯಿದೆ. ಪ್ರತಿ ವರ್ಷದಂತೆ ಈ ಬಾರಿಯೂ ಸ್ವಚ್ಛತಾ ಕಾರ್ಯವನ್ನು ನಡೆಸಲಾಗಿದೆ. ಶಾಸಕ ಜಿ.ಎಸ್. ಪಾಟೀಲರ ಸೂಚನೆಯಂತೆ ಮಲಿನಗೊಂಡ ನೀರನ್ನು ಹೊರತೆಗೆದು ಹೊಸ ನೀರನ್ನು ಬಾವಿಗೆ ಬಿಡಲಾಗಿದೆ. ಪೌರ ಕಾರ್ಮಿಕರು ಬೆಳಗಿನ ಜಾವವೇ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಕೊಂಡಿದ್ದು ಸ್ವಾಗತರ್ಹ ಎಂದರು. ಈ ಸಂದರ್ಭದಲ್ಲಿ ಯಲ್ಲಪ್ಪ ಕೊಪ್ಪದ, ಪುರಸಭೆಯ ಸದಸ್ಯರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಗಣೇಶ ಮೂರ್ತಿಯ ಭವ್ಯ ಮೆರವಣಿಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಪಂ.ಪಂಚಾಕ್ಷರಿ ಗವಾಯಿಗಳವರ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದ ಎ.ಪಿ.ಎಂ.ಸಿ ಯಾರ್ಡ್, ಗದಗ ದಲಾಲ ವರ್ತಕರ ಹಾಗೂ ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಗಣೇಶ ಚತುರ್ಥಿ ನಿಮಿತ್ತ ಬುಧವಾರ ನಗರದ ಮಸಾರಿ ಶ್ರೀ ವರಸಿದ್ಧಿ ವಿನಾಯಕ ದೇವಸ್ಥಾನದಲ್ಲಿ ಶ್ರೀ ಗಣೇಶನ ಮೂರ್ತಿಗೆ ಪೂಜೆ ಸಲ್ಲಿಸಿ ಅಲ್ಲಿಂದ ಎ.ಪಿ.ಎಂ.ಸಿ ಮಾರುಕಟ್ಟೆಯವರಗೆ ವಾದ್ಯ ಮೇಳಗಳೊಂದಿಗೆ ಗಣೇಶನ ಭವ್ಯ ಮೆರವಣಿಗೆ ಜರುಗಿತು.

ನಂತರ ಗಣೇಶನ ಮೂರ್ತಿ ಪ್ರತಿಷ್ಠಾಪನೆ ಮಾಡಿ, ಫಲ-ಪುಷ್ಪಗಳಿಂದ ಅಲಂಕಾರ ಮಾಡಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ್ ವಾರಕರ, ಕಾರ್ಯದರ್ಶಿ ರಾಜು ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ಸಹ ಖಜಾಂಚಿ ನಿತೀಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ದುಂಡಪ್ಪನವರ, ವಿನಯ ಕಾಡಪ್ಪನವರ, ಬಸವರಾಜ ಕಾಡಪ್ಪನವರ, ಪ್ರವೀಣ, ವಿನೀತ ಕವಲೂರ, ಶರತ್ ಅಗಡಿ, ಸಾಗರ ವಜ್ರೇಶ್ವರಿ, ಅಜೀತ ಪುಣೇಕರ್, ಬಸವರಾಜ ಬಾವಿಕಟ್ಟಿ ಮುಂತಾದವರಿದ್ದರು.

### ಅಪರಾಧ ಕೃತ್ಯಗಳನ್ನು ತಡೆಗಟ್ಟಲು ಪೊಲೀಸ್ ಇಲಾಖೆಯಿಂದ ಕ್ರಮ

# ಪಟ್ಟಣದಾದ್ಯಂತ ಸಿ.ಸಿ ಕ್ಯಾಮರಾ ಕಣ್ಗಾವಲು

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣ ವ್ಯಾಪ್ತಿಯಲ್ಲಿ ಈವರೆಗೆ ಸಮರ್ಪಕವಾಗಿ ಸಿ.ಸಿ ಕ್ಯಾಮರಾ ವ್ಯವಸ್ಥೆ ಇರಲಿಲ್ಲ. ಇತ್ತೀಚಿನ ದಿನಗಳಲ್ಲಿ ಪೊಲೀಸ್ ಅಧಿಕಾರಿಗಳ ಇಚ್ಛಾಶಕ್ತಿಯಿಂದ ಕಳ್ಳತನ ಪ್ರಕರಣಗಳನ್ನು ತ್ವರಿತವಾಗಿ ಪತ್ತೆ ಹಚ್ಚುವಲ್ಲಿ, ಸಂಚಾರಿ ನಿಯಮಗಳ ಮೇಲಿನ ಕಣ್ಗಾವಲು, ಶಾಂತಿ-ಸುವ್ಯವಸ್ಥೆಯನ್ನು ಕಾಪಾಡಲು ಪೊಲೀಸ್ ಇಲಾಖೆ ಸಿಸಿ ಕ್ಯಾಮರಾ ಅಳವಡಿಸಲು ಮುಂದಾಗಿದ್ದು, ಇದೀಗ ಶಿರಹಟ್ಟಿ ಪಟ್ಟಣದಾದ್ಯಂತ ಆಯಕಟ್ಟಿನ ಸ್ಥಳಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಲಾಗುತ್ತಿದೆ.

ಶಿರಹಟ್ಟಿಯ ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್ಐ ಚನ್ನಯ್ಯ ದೇವೂರರ ನೇತೃತ್ವದಲ್ಲಿ ಮೇಲಧಿಕಾರಿಗಳ ನಿರ್ದೇಶನದಂತೆ ಶಿರಹಟ್ಟಿ ಪಟ್ಟಣದ ಟಿಪ್ಪು ಸರ್ಕಲ್, ಆಸಾರ್ ಕ್ರಾಸ್, ಜುಮ್ಮಾ ಮಸೀದಿ, ಮದೀನಾ ಮಸೀದಿ, ಕನಕದಾಸರ ಸರ್ಕಲ್, ನೆಹರು ಸರ್ಕಲ್, ಗಾಂಧೀಜಿ ಸರ್ಕಲ್ ಸೇರಿದಂತೆ ಶಿರಹಟ್ಟಿ ಪಟ್ಟಣಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ಆಯಕಟ್ಟಿನ ಸ್ಥಳಗಳಲ್ಲಿ 20ಕ್ಕೂ ಹೆಚ್ಚು ಸಿ.ಸಿ ಕ್ಯಾಮರಾಗಳನ್ನು ಅಳವಡಿಸಿ ಅವುಗಳನ್ನು ನಿರಂತರವಾಗಿ ನಿರ್ವಹಣೆ ಮಾಡಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

ಪಟ್ಟಣದಲ್ಲಿ ಸಮರ್ಪಕ ಸಿಸಿ ಕ್ಯಾಮರಾ ಅಳವಡಿಕೆ ಇಲ್ಲದೇ ಇರುವುದರಿಂದ ಕೆಲವರು ಸಂಚಾರಿ ನಿಯಮಗಳನ್ನು ಪಾಲಿಸದೇ ರಸ್ತೆಯಲ್ಲಿ ಅಡ್ಡಾದಿಡ್ಡಿಯಾಗಿ ವಾಹನ ಚಲಾಯಿಸುತ್ತಿದ್ದರು. ಇಂತಹವರಿಗೆ ಇನ್ನು ಮುಂದೆ ಇಲಾಖೆ ದಂಡ ಪ್ರಯೋಗ ಮಾಡಲು ವ್ಯವಸ್ಥೆ ಮಾಡಿಕೊಂಡಿದೆ. ಇದರೊಂದಿಗೆ ಕಳ್ಳತನ ಪ್ರಕರಣದಲ್ಲಿ ಭಾಗಿಯಾಗಿದ್ದವರ ಪತ್ತೆಗೆ ಸುಲಭವಾಗುವುದರ ಜೊತೆಗೆ ಇದೀಗ ಪಟ್ಟಣದಲ್ಲಿ ಗಣೇಶ ವಿಸರ್ಜನೆ ಮತ್ತು ಈದ್ ಮಿಲಾದ್ ಹಬ್ಬದಲ್ಲಿ ಅಹಿತಕರ ಘಟನೆಗಳು ಜರುಗದಂತೆ



ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಪೊಲೀಸ್ ಇಲಾಖೆ ತಂತ್ರಜ್ಞಾನದ ನೆರವಿನಿಂದ ವ್ಯವಸ್ಥೆಯನ್ನು ಬಿಗಿಗೊಳಿಸುತ್ತಿದ್ದು, ಇನ್ನು ಮುಂದೆ ಸಾರ್ವಜನಿಕರು ಎಚ್ಚರಿಕೆಯಿಂದಿರುವ ಅಗತ್ಯವಿದೆ.

ಶಿರಹಟ್ಟಿ ಪಟ್ಟಣವು ಕೋಮು-ಸೌಹಾರ್ದತೆಯ ಪ್ರತೀಕವಾಗಿದ್ದು, ಇಲ್ಲಿ ಹಬ್ಬ-ಹರಿದಿನಗಳನ್ನು ಭಾವೈಕ್ಯತೆಯಿಂದ ಆಚರಿಸುತ್ತಾ ಬರಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಪಟ್ಟಣವೂ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಕಳ್ಳತನ ಪ್ರಕರಣಗಳು ದಾಖಲಾಗುತ್ತಿರುವದನ್ನು ಗಂಭೀರವಾಗಿ ಪರಿಗಣಿಸಿದ ಇಲಾಖೆ ಇದಕ್ಕೆ ಕಡಿವಾಣವನ್ನು ಹಾಕಲು ಮುಂದಾಗಿ, ಕಳ್ಳತನದಲ್ಲಿ ಭಾಗಿಯಾದ ಅಂತಾರಾಜ್ಯ ಕಳ್ಳರನ್ನು ಸಹ ಬಂಧಿಸಿ ಮೇಲಧಿಕಾರಿಗಳಿಂದ ಪ್ರಶಂಸೆಗೆ ಪಾತ್ರರಾಗಿದ್ದಾರೆ. ಅಪರಾಧ ಪ್ರಕರಣಗಳ ಶೀಘ್ರ ಪತ್ತೆ, ಸಂಚಾರಿ ನಿಯಮ ಪಾಲನೆ ಮತ್ತು ಶಾಂತಿ-ಸುವ್ಯವಸ್ಥೆಗೆ ಆದ್ಯತೆ ನೀಡಲು ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗುತ್ತಿದೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ.

ಸದ್ಯ ಶಿರಹಟ್ಟಿ ಪಟ್ಟಣದ ಬಸವೇಶ್ವರ ವೃತ್ತದಿಂದ ನೆಹರು ವೃತ್ತದವರೆಗೆ ದಿನಕ್ಕೆ ಒಂದು ಬದಿ ರಸ್ತೆ ಪಾರ್ಕಿಂಗ್ ವ್ಯವಸ್ಥೆ ಇದ್ದು, ರಸ್ತೆಯು ಇಕ್ಕಟ್ಟಾಗಿದ್ದರಿಂದ ಸಾರ್ವಜನಿಕರು ಮತ್ತು ಪೊಲೀಸ್ ಸಿಬ್ಬಂದಿಗಳು ನಿತ್ಯವೂ ಸಂಚಾರ ವ್ಯವಸ್ಥೆಗೆ ಹರಸಾಹಸ ಪಡುತ್ತಿದ್ದಾರೆ. ಇದರ ಜೊತೆಗೆ ನೆಹರು ವೃತ್ತ, ಬಸ್ ನಿಲ್ದಾಣದ ಸುತ್ತಮುತ್ತ, ತಹಸೀಲ್ದಾರ ಕಚೇರಿ ಸುತ್ತಮುತ್ತಲೂ ದಿನದಿಂದ ದಿನಕ್ಕೆ ಜನದಟ್ಟಣೆ ಹೆಚ್ಚಾಗುತ್ತಿದ್ದು, ಶಾಲಾ-ಕಾಲೇಜುಗಳು ಬಿಟ್ಟ ನಂತರ ಈ ರಸ್ತೆಗಳು ಜನದಟ್ಟಣೆಯಿಂದ ಕೂಡಿರುತ್ತವೆ. ಎಲ್ಲೆಂದರಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡುತ್ತಿರುವದರಿಂದ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದೆ. ಈ ಬಗ್ಗೆಯೂ ಸಹ ಪೊಲೀಸ್ ಅಧಿಕಾರಿಗಳು ಕ್ರಮ ವಹಿಸಿ ಪಟ್ಟಣದಲ್ಲಿ ಸುಗಮ ಸಂಚಾರಕ್ಕೆ ಅವಕಾಶವನ್ನು ಮಾಡಿಕೊಡಬೇಕೆಂದು ಪಟ್ಟಣದ ಪ್ರಜ್ಞಾವಂತರ ಅನಿಸಿಕೆಯಾಗಿದೆ.

> ಈ ಕುರಿತು ಪ್ರತಿಕ್ರಿಯಿಸಿದ ಶಿರಹಟ್ಟಿ ಸಿಪಿಐ ನಾಗರಾಜ ಮಾಡಳ್ಳಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನಿರ್ದೇಶನದಂತೆ ಕಳ್ಳತನ ಪ್ರಕರಣ ಪತ್ತೆಗೆ, ಸಂಚಾರಿ ನಿಯಮ ಪಾಲನೆಗೆ ಹಾಗೂ ಶಾಂತಿ-ಸುವ್ಯವಸ್ಥೆಯನ್ನು ಕಾಪಾಡುವುದಕ್ಕಾಗಿ ಸಿಸಿ ಕ್ಯಾಮರಾಗಳನ್ನು ಅಳವಡಿಸುತ್ತಿದ್ದು, ಸಾರ್ವಜನಿಕರು ಸಂಚಾರಿ ನಿಯಮಗಳನ್ನು ಪಾಲಿಸುವುದು ಕಡ್ಡಾಯ. ಇಲ್ಲದಿದ್ದರೆ ಕಾನೂನಿನ ಪ್ರಕಾರ ಕ್ರಮ ವಹಿಸಲಾಗುವುದು ಎಂದರು.

## ಜೆಡಿಎಸ್‌ನಿಂದ ನಾಳೆ 'ಸತ್ಯಯಾತ್ರೆ'

▸▸ ಮೊದಲನೇ ಪುಟದಿಂದ

ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವೂ ಈ ಅಪಪ್ರಚಾರಕ್ಕೆ ಪರೋಕ್ಷವಾಗಿ ಬೆಂಬಲ ನೀಡುತ್ತಿರುವ ಅನುಮಾನ ಭಕ್ತರಲ್ಲಿ ಮೂಡಿದೆ. ಒಬ್ಬ ಅನಾಮಿಕ ವ್ಯಕ್ತಿ ನೀಡಿದ ಹೇಳಿಕೆ ಆಧರಿಸಿ ಸರ್ಕಾರ ಯಾವುದೇ ಯೋಚನೆ ಮಾಡದೆ ಎಸ್‌ಐಟಿ ತನಿಖೆಗೆ ಆದೇಶಿಸಿದೆ. ಇದು ಭಕ್ತರ ನಂಬಿಕೆಗೆ ದ್ರೋಹ ಬಗೆಯುವ ಕೆಲಸವಾಗಿದೆ. ಈ ವಿಷಯದಲ್ಲಿ ಸರ್ಕಾರ ಮೌನ ವಹಿಸಿದ್ದು, ಷಡ್ಯಂತ್ರದ ಹಿಂದಿರುವ ಕಾಣದ ಕೈಗಳನ್ನು ಗುರುತಿಸಬೇಕು ಎಂದು ಅವರು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಈರಣ್ಣ ಬಾಳಿಕಾಯಿ, ಗಿರೀಶ್ ಸಂಶಿ, ಹಾಜಿಅಲಿ ಕೊಪ್ಪಳ, ನಿಂಗಪ್ಪ ಪ್ಯಾಟಿ, ತಿಪ್ಪಣ್ಣ ಹುಡೇದ, ದೇವಪ್ಪ ಮಲ್ಲಸಮುದ್ರ, ಕೆ.ಎಫ್. ದೊಡ್ಡಮನಿ, ಸಂಗಪ್ಪ ಯರಹುಣಸಿ, ಚನ್ನಪ್ಪ ಹರಿಹರ, ಭಾಷಾಸಾಬ್ ಬಾಗ್ವಾನ್, ಎಂ.ಎಂ. ಜಾವೂರ ಮುಂತಾದವರಿದ್ದರು.

## ರಾಷ್ಟ್ರೀಯ ಕ್ರೀಡಾ ದಿನ ಆಚರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ ರಾಷ್ಟ್ರೀಯ ಕ್ರೀಡಾ ದಿನ ಆಚರಿಸಲಾಯಿತು. ಶಾಲೆಯ ನಿರ್ದೇಶಕ ವಿನಾಯಕ ಆರ್, ಪ್ರಾಚಾರ್ಯ ವಿ.ಎಂ. ಅಡ್ನೂರ್, ಉಪ ಪ್ರಾಚಾರ್ಯ ಪಿ.ಜಿ. ಬ್ಯಾಳಿ ಅವರು ಭಾರತೀಯ ಸರ್ವಕಾಲಿಕ ಶ್ರೇಷ್ಠ ಆಟಗಾರರಾದ ಮೇಜರ್ ಧ್ಯಾನ್‌ಚಂದ್‌ರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ಕ್ರೀಡಾ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕ್ರೀಡಾ ಮಂತ್ರಿ ಶ್ವೇತಾ ಯಮಗೌಳಿ ಹಾಗೂ ಸಂಗಡಿಗರು ಕ್ರೀಡಾ ಜ್ಯೋತಿಯನ್ನು ತಂದರು. ಪಂಡಿತ ಪುಟ್ಟರಾಜ ಮ್ಯೂಜಿಕ್ ಕ್ಲಬ್ ವತಿಯಿಂದ ಸಿಂಚನಾ ತಳವಾರ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆಯನ್ನು ಹಾಡಿದರು. ವಿದ್ಯಾರ್ಥಿನಿ ಐಮನ್ ಕೊಪ್ಪಳ ರಾಷ್ಟ್ರೀಯ ಕ್ರೀಡಾ ದಿನದ ಬಗ್ಗೆ ಭಾಷಣ ಮಾಡಿದಳು. ದೀಪಾ ವಾರದ್ ನಿರೂಪಿಸಿದಳು. ಶಾಲೆಯ ಸಮಸ್ತ ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಗಣೇಶ ಚತುರ್ಥಿ ನಿಮಿತ್ತ ಗದಗ-ಬೆಟಗೇರಿ ನಗರಸಭೆಯಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡಿ ಪೂಜೆ ಸಲ್ಲಿಸಲಾಯಿತು. ಪೂಜಾ ಕಾರ್ಯಕ್ರಮದಲ್ಲಿ ನಿವೃತ್ತ ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ವಿರೂಪಾಕ್ಷ ರಾಮಗಿರಿ, ನಾಗೇಶ ಬಳ್ಳಾರಿ, ಅರವಿಂದ ಕೆ, ನಗರಸಭೆ ಸಿಬ್ಬಂದಿಗಳಾದ ಪಿ.ಎಫ್. ಶೇರಖಾನ, ಎಸ್.ವ್ಹಿ. ತೋಟಗಿ, ಪೂಜಾರ, ಜಿ.ಕೆ. ಬಳ್ಳಾರಿ ಮುಂತಾದವರು ಉಪಸ್ಥಿತರಿದ್ದರು.

## ಬೆಳೆಯೂ ಇಲ್ಲ, ಬೆಲೆಯೂ ಇಲ್ಲ

▸▸ ಮೊದಲನೇ ಪುಟದಿಂದ

ಸಾವಿರಾರು ರೂ ಖರ್ಚು ಮಾಡಿ ರೈತರು ಮೂರು ಬಾರಿ ಕ್ರಿಮಿನಾಶಕ ಸಿಂಪಡಣೆ ಮಾಡಿದ್ದರು. ಉಳಿದ ಬೆಳೆ ಅತಿವೃಷ್ಟಿಯಿಂದ ನೀರು ಪಾಲಾಗಿ ರೈತರ ಕನಸು ನುಚ್ಚು ನೂರಾಗಿದೆ. ಅಳಿದುಳಿದ ಬೆಳೆ ಕಟಾವಿನ ಅವಧಿಯಲ್ಲಿಯೇ ನಿರಂತರ ಸುರಿದ ಮಳೆಗೆ ಒಂದಷ್ಟು ಜಮೀನಿನಲ್ಲಿಯೇ ನೀರು ಪಾಲಾಯಿತು. ಕಟಾವು ಮಾಡಿಸಿ ಒಣ ಹಾಕಿದ ಉಳಿದ ಫಸಲೂ ಸಹ ಮಳೆ ಬಿಡುವಿಲ್ಲದ್ದರಿಂದ ಹಾಳಾಯಿತು. ನಿರಂತರ ಮಳೆಯಿಂದ ನೆಲ ಕಚ್ಚಿದ ಹೆಸರು ಗಿಡಲ್ಲಿಯೇ ಮೊಳಕೆಯಾಗಿ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಯಿತು.

ಉಳಿದ ಹತ್ತರಲ್ಲಿ ಒಂದು ಪಾಲು ಮಾರುಕಟ್ಟೆಗೆ ತಂದ-ರೆ ಕೇಳುವವರೇ ಇಲ್ಲದ್ದರಿಂದ ಕೇಳಿದ ಬೆಲೆಗೆ ಕೊಟ್ಟು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಎಕರೆಗೆ ಸರಾಸರಿ 5/6 ಕ್ವಿಂಟಲ್ ಫಸಲು ನಿರೀಕ್ಷೆಯಲ್ಲಿದ್ದ ರೈತರ ಕೈಗೆ ಬಂದಿದ್ದು ಸರಾಸರಿ 1/2 ಕ್ವಿಂಟಲ್ ಮಾತ್ರವಿದ್ದು, ಅದೂ ಸಹ ಸಂಪೂರ್ಣ ಗುಣಮಟ್ಟ ಇಲ್ಲದ್ದರಿಂದ ಮಾರುಕಟ್ಟೆಯಲ್ಲಿ ಬೆಲೆ ಪಾತಾಳಕ್ಕೆ ಕುಸಿದಿದೆ. ಗೊಬ್ಬರ, ಬೀಜ, ಬಿತ್ತನೆ, ಕ್ರಿಮಿನಾಶಕ ಬಳಕೆ, ಆಳು ಸೇರಿ ಪ್ರತಿ ಎಕರೆ ಹೆಸರು ಬಿತ್ತನೆ ಪ್ರಾರಂಭದಿಂದ ಮಾರುಕಟ್ಟೆಗೆ ಸಾಗಿಸುವರೆಗೂ ಕನಿಷ್ಠ 25 ಸಾವಿರ ರೂ ಖರ್ಚು ಮಾಡಲಾಗುತ್ತಿದೆ. ಉತ್ತಮ ಗುಣಮಟ್ಟದ ಹೆಸರಿಗೆ 9000-10000 ರೂ ದರವಿದ್ದರೂ ಸದ್ಯ ರೈತರ ಹೆಸರು ಬೆಳೆಗೆ ಸಿಗುತ್ತಿರುವುದು ಕನಿಷ್ಠ 1000ದಿಂದ ಸರಾಸರಿ 5000 ರೂ ಮಾತ್ರ.

ಈ ವರ್ಷ ತಾಲೂಕಿನಲ್ಲಿ 5850 ಹೆಕ್ಟೇರ್ ಗುರಿ ಮೀರಿ ಬಿತ್ತನೆ ಮಾಡಲಾಗಿತ್ತು. ಬೆಳೆ ಹಾಳಾಗಿದ್ದರೂ ಕೃಷಿ ಕೂಲಿಕಾರರ ಕೊರತೆಯಿಂದ ಹೆಣ್ಣಾಳಿಗೆ 400 ರೂ, ಗಂಡಾಳಿಗೆ 500 ರೂ ಕೂಲಿ ಕೊಡಲಾಗಿದೆ. ಹೆಸರು ಬೆಳೆಯಷ್ಟೇ ಅಲ್ಲದೆ ಶೇಂಗಾ, ಹತ್ತಿ, ಉಳ್ಳಾಗಡ್ಡಿ, ಮೆಕ್ಕೆಜೋಳ, ಮೆಣಸಿನಕಾಯಿ ಬೆಳೆಗಳೂ ಹಾಳಾಗಿ ಸಂಪೂರ್ಣ ಮುಂಗಾರೇ ಕೈಕೊಡುವ ಪರಿಸ್ಥಿತಿ ನಿರ್ಮಾಣವಾಗಿದೆ.

## ಗಣೇಶೋತ್ಸವದ ಪ್ರಯುಕ್ತ ವಿವಿಧ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಬಸವೇಶ್ವರ ನಗರದ ಶ್ರೀ ಗಜಾನನೋತ್ಸವ ವಿವಿಧೋದ್ದೇಶಗಳ ಸೇವಾ ಸಂಘದ ಶ್ರೀ ಗಜಾನನೋತ್ಸವ ಸಮಿತಿಯ 133ನೇ ವರ್ಷದ ಸಾರ್ವಜನಿಕ ಗಣೇಶೋತ್ಸವ ಹಾಗೂ ಮಂಡಳಿಯ 37ನೇ ವರ್ಷದ ಗಣೇಶೋತ್ಸವ ಪ್ರಯುಕ್ತ ಬಣಗಾರ ಸಮಾಜದ ವತಿಯಿಂದ ಪ್ರತಿಭಾ ಪುರಸ್ಕಾರ, 50 ವರ್ಷಗಳ ದಾಂಪತ್ಯ ಪೂರೈಸಿದ ದಂಪತಿಗಳಿಗೆ ಸನ್ಮಾನ, ಚಿಕ್ಕ ಮಕ್ಕಳಿಗೆ ಡ್ಯಾನ್ಸ್ ಕಾರ್ಯಕ್ರಮ ಜರುಗುವುದೆಂದು



ಸಂಚಾಲಕ ಮಹಾಂತೇಶ ಕಾತರಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 'ಶ್ರೀ ಸಿದ್ಧಾರೂಡ ಕಥಾಮೃತ' ಪುರಾಣ ಮಂಗಲದಲ್ಲಿ ಜಿಮ್ಸ್ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ

## ಸಂಪ್ರದಾಯಗಳು ಎಲ್ಲರನ್ನೂ ಸನ್ಮಾರ್ಗದತ್ತ ನಡೆಸುತ್ತವೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರಾವಣದ ಪವಿತ್ರ ಕಾಲದಲ್ಲಿ ನಡೆಯುವ ಮಹಾತ್ಮರು, ಶರಣರು, ಸಂತರು, ಪುಣ್ಯ ಪುರುಷರ ಪುರಾಣ ಪ್ರವಚನಗಳು, ಸತ್ಸಂಗ, ಧರ್ಮ ಕಾರ್ಯಗಳು, ಹಬ್ಬಗಳ ಸಂಪ್ರದಾಯಗಳು ಎಲ್ಲರನ್ನೂ ಸನ್ಮಾರ್ಗದತ್ತ ಸಾಗಿಸಿ ಶಾಂತಿ, ನೆಮ್ಮದಿ, ಸಮೃದ್ಧಿ ಕೊಡುತ್ತವೆ ಎಂದು ಜಿಮ್ಸ್ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ ಹೇಳಿದರು.

ಅವರು ಪಟ್ಟಣದ ಶ್ರೀ ಸೋಮೇಶ್ವರ ಪುರಾಣ ಸೇವಾ ಸಮಿತಿಯಿಂದ ಹಮ್ಮಿಕೊಂಡಿರುವ ಶ್ರೀ ಸಿದ್ಧಾರೂಡ ಕಥಾಮೃತ ಪುರಾಣ ಮಂಗಲ ಕಾರ್ಯಕ್ರಮದಲ್ಲಿ ಮಾತನಾಡಿ, ನಿತ್ಯದ ಬದುಕಿನ ಜಂಜಾಟದ ನಡುವೆ ಧರ್ಮಕಾರ್ಯ, ಸತ್ಸಂಗ, ಪುರಾಣ-ಪುಣ್ಯಕಥೆ ಆಲಿಸುವುದರಿಂದ ಸಾರ್ಥಕ ಬದುಕಿನ ಮಾರ್ಗ ತೆರೆದುಕೊಳ್ಳುತ್ತದೆ ಎಂದರು.

ಜೀವನದುದ್ದಕ್ಕೂ ಧರ್ಮ ಜಾಗೃತಿ, ಸಂಸ್ಕೃತಿ, ಸಮನ್ವಯತೆ, ಸತ್ಯ, ನ್ಯಾಯ, ನೀತಿ, ಧರ್ಮ ಹೀಗೆ ಲೋಕಕಲ್ಯಾಣಕ್ಕಾಗಿ ತಮ್ಮನ್ನು ಸಮರ್ಪಿಸಿಕೊಂಡ ಮಹಾತ್ಮರ ಚಿಂತನೆ, ಆದರ್ಶ, ಮೌಲ್ಯಗಳು ಇಂದಿಗೂ ಸಮಾಜಕ್ಕೆ ಬೆಳಕಾಗಿವೆ. ಮಾನವ ಜೀವನದ ನಂತರವೂ ಸಮಾಜ ಸ್ಮರಿಸುವ ಶ್ರೇಷ್ಠ ಬದುಕು ರೂಪಗೊಳ್ಳಲು ಸಜ್ಜನರ ಸಹವಾಸ, ಶ್ರೇಷ್ಠರ ಆಚಾರ-ವಿಚಾರಗಳು, ಧರ್ಮದ ಸಂಸ್ಕಾರ ಮನುಷ್ಯನಿಗೆ ಅಗತ್ಯ ಅಂತಹ ವಾತಾವರಣ ಕಲ್ಪಿಸುವುದು ಇಂದಿನ ಅಗತ್ಯಗಳಲ್ಲೊಂದಾಗಿದೆ. ಕೃಷಿಯನ್ನೇ ಬದುಕಾಗಿಸಿಕೊಂಡಿರುವ ರೈತ ಸಮುದಾಯದವರಿಂದ ಇಂದಿಗೂ ಪುರಾಣ, ಪ್ರವಚನ, ಭಜನೆ, ಜಾನಪದ ಸಂಪ್ರದಾಯಗಳು ನಡೆಯುತ್ತಿರುವುದು ಪ್ರಶಂಸನೀಯ ಎಂದರು.

ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್‌ನ ಅಧ್ಯಕ್ಷ ಗುರಣ್ಣ ಪಾಟೀಲ ಕುಲಕರ್ಣಿ, ಬಸವೇಶ ಮಹಾಂತಶೆಟ್ಟರ, ಸುರೇಶ ರಾಚನಾಯ್ಕರ, ಚನ್ನಪ್ಪ ಜಗಲಿ, ಶಂಕರ ಬಾಳಿಕಾಯಿ, ನಾಗರಾಜ ಕಳಸಾಪುರ, ವಿರೂಪಾಕ್ಷ ಆದಿ, ಸಿದ್ದನಗೌಡ ಬಳ್ಳೊಳ್ಳಿ, ಮಯೂರ ಪಾಟೀಲ, ನಂದೀಶ ಬಂಡಿವಾಡ, ಶಿವಪುತ್ರಪ್ಪ ಚಾಕಲಬ್ಬಿ, ನೀಲಪ್ಪ ಕರ್ಜೆಕಣ್ಣವರ, ಅಶೋಕ ಸಾತಣ್ಣವರ, ಅರ್ಚಕ ಸಮೀರ ಪೂಜಾರ, ಬಸವರಾಜ ಮೆಣಸಿನಕಾಯಿ ಮುಂತಾದವರಿದ್ದರು.

ಜಯಪ್ರಕಾಶ ಹೊಟ್ಟಿ, ಸೋಮಶೇಖರ ಕೆರಿಮನಿ, ಜಿ.ಎಸ್. ಗುಡಗೇರಿ ನಿರ್ವಹಿಸಿದರು. ಡಾ. ಪಂಡಿತ ಪುಟ್ಟರಾಜ ಗವಾಯಿಗಳ ಶಿಷ್ಯ ಪಂ. ಗುರುಮಹಾಂತಯ್ಯ ಶಾಸ್ತ್ರಿ ಆರಾಧ್ಯಮಠ ಗವಾಯಿಗಳು ಪುರಾಣ ಪಠಣ-ಪ್ರವಚನಗೈದರೆ, ವಿಜಯಕುಮಾರ ಸುತಾರ ತಬಲಾ ಸಾಥ್ ನೀಡಿದರು.

## ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ: ಮಾಹಿತಿ ನೀಡಲು ಸೆ.1ರವರೆಗೆ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳು, ಇತರೆ ಜಾತಿಗಳು ಅನುಸೂಚಿತ ಜಾತಿ ಮತ್ತು ಪಂಗಡಗಳು ಸೇರಿದಂತೆ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸರ್ಕಾರದ ಆದೇಶಾನುಸಾರ ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳು ಮತ್ತು ಇತರೆ ಜಾತಿ/ಉಪಜಾತಿಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ದಿನಾಂಕ: 22.08.2025 ರಂದು ಮಾಧ್ಯಮಗಳಿಗೆ ಸುದ್ದಿ ಬಿಡುಗಡೆ ಮಾಡಿ ಯಾವುದೇ ಜಾತಿ/ಉಪಜಾತಿಗಳು ಬಿಟ್ಟು ಹೋಗಿದ್ದಲ್ಲಿ, ಅಂತಹ ಅಂಶಗಳ ಬಗ್ಗೆ ಸಲಹೆ, ಸೂಚನೆಗಳು ಇದ್ದಲ್ಲಿ, 07 ದಿನಗಳ ಒಳಗೆ ನೀಡಲು ಕೋರಲಾಗಿತ್ತು.

ಸಾರ್ವಜನಿಕರು ಹಾಗೂ ವಿವಿಧ ಸಂಘ ಸಂಸ್ಥೆಗಳು ಈ ಅವಧಿಯನ್ನು ವಿಸ್ತರಿಸಲು ಕೋರಿರುವ ಕಾರಣ, ಈ ಬಗ್ಗೆ ಸಲಹೆ/ಸೂಚನೆ ಮನವಿಗಳನ್ನು ನೀಡುವ ಅವಧಿಯನ್ನು ದಿನಾಂಕ: 01.09.2025 ರ ಸಂಜೆ 5.00 ಗಂಟೆಯವರೆಗೆ ವಿಸ್ತರಿಸಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ. ಸಂಗ್ರಹಿಸಲಾದ ಜಾತಿ/ಉಪಜಾತಿಗಳ ಪಟ್ಟಿಯನ್ನು ಸೆಪ್ಟೆಂಬರ್ ತಿಂಗಳಲ್ಲಿ ಪ್ರಾರಂಭವಾಗಲಿರುವ ಸಮೀಕ್ಷೆಗಾಗಿ ಮಾತ್ರ ಉಪಯೋಗಿಸಲಾಗುವುದು.

ಸಾರ್ವಜನಿಕರು ತಮ್ಮ ಸಲಹೆ/ಸೂಚನೆ/ ಮನವಿಗಳನ್ನು ಸದಸ್ಯ ಕಾರ್ಯದರ್ಶಿಗಳು,ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ನಂ.16, ಡಿ.ದೇವರಾಜ ಅರಸು ಭವನ,ಮಿಲ್ಲರ್ಸ್ ಟ್ಯಾಂಕ್ ಬಂಡ್ ಪ್ರದೇಶ, ವಸಂತ ನಗರ, ಬೆಂಗಳೂರು ಅಥವಾ kscbcb@gmail.com ಇ-ಮೇಲ್ ವಿಳಾಸಕ್ಕೆ ಕಳುಹಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ದೂ.ಸಂಖ್ಯೆ 080-29506668 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಮಳೆಯಲ್ಲಿಯೇ ಮುಂದುವರೆದ ಅಹೋರಾತ್ರಿ ಧರಣಿ 11ನೇ ದಿನಕ್ಕೆ

# ರೈತ ವಿರೋಧಿ ಧೋರಣೆಗೆ ಖಂಡನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ ಭವನದ ಎದುರು ಉತ್ತರ ಕರ್ನಾಟಕ ಮಹಾಸಭಾದಿಂದ ರೈತರ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕಳೆದ 10 ದಿನಗಳಿಂದ ಜಿಲ್ಲೆಯ ರೈತರು ಅಹೋರಾತ್ರಿ ಧರಣಿ ನಡೆಸುತ್ತಿದ್ದು, ಗುರುವಾರ ಜಿಲ್ಲಾಡಳಿತದ ಎದುರು ನಡೆಯುತ್ತಿರುವ ಅಹೋರಾತ್ರಿ ಧರಣಿಯಲ್ಲಿ ರೈತ ವಿರೋಧಿ ಧೋರಣೆಯನ್ನು ಖಂಡಿಸಿ ರೈತರು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಗುರುವಾರ ಧರಣಿ ಸ್ಥಳಕ್ಕೆ ಅಖಿಲ ಕರ್ನಾಟಕ ಮಹಿಳಾ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷೆ ಮಹಾದೇವಿ ಎಮ್. ಹುಯಿಲಗೋಳ ಭೇಟಿ ನೀಡಿ ರೈತರ ಹೋರಾಟಕ್ಕೆ ಬೆಂಬಲ ಸೂಚಿಸಿ, ಕೂಡಲೇ ರೈತರ ಬೇಡಿಕೆಗಳನ್ನು ಜಿಲ್ಲಾಡಳಿತ ಈಡೇರಿಸಬೇಕು ಎಂದು ಆಗ್ರಹಿಸಿದರು.

ವಕೀಲರು ಮತ್ತು ಮಾಹಿತಿ ಹಕ್ಕು ಹೋರಾಟಗಾರರಾದ ಎಂ.ಐ. ಮುಲ್ಲಾ ಮಾತನಾಡುತ್ತಾ, ರೈತರ ಹೋರಾಟ ನೈಜವಾದ ಹೋರಾಟವಾಗಿದೆ. ಮಳೆಯಲ್ಲಿ ರೈತರರು ಬೀದಿಯಲ್ಲಿ ಕುಳಿತು ಹೋರಾಟ ಮಾಡುವ ಸ್ಥಿತಿಯನ್ನು ತಂದಿರುವ ಜಿಲ್ಲಾಡಳಿತದ ನಡೆಯನ್ನು ಖಂಡಿಸುತ್ತೇನೆ. ಜಿಲ್ಲಾ ಉಸ್ತುವಾರಿ ಸಚಿವರು ಧರಣಿ ನಿರತರನ್ನು ಭೇಟಿಯಾಗಿ ಅವರ ಸಮಸ್ಯೆಯನ್ನು ಆಲಿಸಿ ಸೂಕ್ತ ಪರಿಹಾರಕ್ಕೆ ಮುಂದಾಗಬೇಕೆಂದು ಆಗ್ರಹಿಸಿದರು.

ಬೆಳದಡಿಯ ಕುಬೇರಪ್ಪ ಪವಾರ ಉಪಸ್ಥಿತರಿದ್ದರು. ಪ್ರತಿಭಟನಾ ಸ್ಥಳದಲ್ಲಿ ಎನ್.ಟಿ. ಪೂಜಾರ, ಚಂಬಣ್ಣ ಚನ್ನಪಟ್ಟಣ, ನಾಮದೇವ, ನಿಂಗಪ್ಪ, ಚನ್ನಪ್ಪ ಭಗತ, ಫಿರೋಜ ನದಾಫ್ ಸೇರಿದಂತೆ ರೈತರು, ಮಹಿಳೆಯರು ಇದ್ದರು.

> ಸತತ ಮಳೆಯಿಂದ ಧರಣಿಯ ಸ್ಥಳದಲ್ಲಿ ಮಳೆಯ ನೀರು ನಿಂತಿದ್ದು, ಇದರಿಂದ ಧರಣಿ ನಿರತರಿಗೆ ಸೊಳ್ಳೆಗಳಿಂದ ಡೆಂಗ್ಯೂ, ಮಲೇರಿಯಾದಂತಹ ರೋಗಗಳು ಹರಡುವ ಭಯ ರೈತರನ್ನು ಕಾಡುತ್ತಿದೆ.
>
> ಗದಗ-ಬೇಟಗೇರಿ ನಗರಸಭೆಯ ಯಾವೊಬ್ಬ ಅಧಿಕಾರಿಯೂ ನೀರು ತುಂಬಿರುವ ಸ್ಥಳದಲ್ಲಿ ಹೋಗದೆ ಇರುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ. ಕೂಡಲೇ ನಗರಸಭೆಯ ಅಧಿಕಾರಿಗಳು ಎಚ್ಚೆತ್ತು ರೈತರಿಗೆ ಹರಡಬಹುದಾದ ರೋಗಗಳನ್ನು ತಡೆಯುವ ನಿಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ಧರಣಿ ನಿರತರು ಆಗ್ರಹಿಸಿದ್ದಾರೆ.

## ನಾಯಿಗಳ ರಕ್ಷಣೆಗೆ ಶೆಡ್ ನಿರ್ಮಾಣ ಮಾಡೋ ಪ್ಲ್ಯಾನ್ ಇದೆ: ಯುಟಿ ಖಾದರ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಾಯಿಗಳ ರಕ್ಷಣೆಗೆ ಶೆಡ್ ನಿರ್ಮಾಣ ಮಾಡೋ ಪ್ಲ್ಯಾನ್ ಇದೆ ಎಂದು ಸ್ಪೀಕರ್ ಯುಟಿ ಖಾದರ್ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ವಿಧಾನಸೌಧದಲ್ಲಿರೋ ನಾಯಿಗಳ ರಕ್ಷಣೆ ಸಂಬಂಧ ಸರ್ಕಾರಕ್ಕೆ ವಿವರವಾದ ಮಾಹಿತಿ ಜೊತೆಗೆ ಪ್ರಸ್ತಾವನೆ ಕಳಿಸಿದ್ದೇವೆ. ಸರ್ಕಾರ ನಮಗೆ ಅನುಮತಿ ಕೊಟ್ಟರೆ ನಾಯಿಗಳಿಗೆ ಪ್ರತ್ಯೇಕ ನಿರ್ವಹಣೆ ಮಾಡೋ ಬಗ್ಗೆ ತೀರ್ಮಾನ ಮಾಡ್ತೀವಿ. ವಿಧಾನಸೌಧದಲ್ಲಿ 53 ನಾಯಿಗಳು ಇವೆ. ನಾಯಿಗಳು ವಿಧಾನಸೌಧದ ಒಳಗೆ ಬಾರದಂತೆ ತಡೆಯಲು ಗೇಟ್ ವ್ಯವಸ್ಥೆ ಇಲ್ಲ. ಶಾಸಕರು ವಾಕಿಂಗ್ ಮಾಡಬೇಕಾದ್ರೆ, ಜನರು ವಿಸಿಟ್ ಮಾಡಿದಾಗ ತೊಂದರೆ ಆಗ್ತಿದೆ. ಹೀಗಾಗಿ ನಾವು ಅವುಗಳ ರಕ್ಷಣೆಗೆ ಶೆಡ್ ನಿರ್ಮಾಣ ಮಾಡೋ ಪ್ಲ್ಯಾನ್ ಇದೆ ಎಂದಿದ್ದಾರೆ.

## ನಿಧನ

### ಸರೋಜಮ್ಮ ಬಳಿಗಾರ



**ಲಕ್ಷ್ಮೇಶ್ವರ:** ಪಟ್ಟಣದ ಸೊಪ್ಪಿನಕೆರೆ ಓಣಿಯ ಹಿರಿಯರಾದ ಸರೋಜಮ್ಮ ಶಿವಾನಂದಪ್ಪ ಬಳಿಗಾರ (79) ಆ.27ರಂದು ನಿಧನ ಹೊಂದಿದರು. ಮೃತರಿಗೆ ಪುತ್ರ, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವಿದೆ.

## ಪಟಾಕಿ ಅಂಗಡಿಗಳ ಸ್ಥಳಾಂತರಕ್ಕೆ ಆದೇಶ

■ವಿಜಯಸಾಕ್ಷಿ ಸುದ್ದಿ, ಗದಗ

ಗಣೇಶ ಚತುರ್ಥಿ ಹಾಗೂ ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯಲ್ಲಿ ಅಧಿಕೃತ ಲೈಸನ್ಸ್ ಪಡೆದುಕೊಂಡು ಕ್ರಮಬದ್ಧವಾಗಿ ನವೀಕರಣವಾಗಿರುವ ಪಟಾಕಿ ಲೈಸನ್ಸ್‌ದಾರರ ಅಂಗಡಿಗಳನ್ನು ಗಣೇಶ ಚತುರ್ಥಿಯ ಪ್ರಯುಕ್ತ ಆಗಸ್ಟ್ 27ರಿಂದ ಸೆಪ್ಟೆಂಬರ್ 7ರವರೆಗೆ ಮತ್ತು ದೀಪಾವಳಿ ಹಬ್ಬದ ಪ್ರಯುಕ್ತ ಅಕ್ಟೋಬರ್ 19ರಿಂದ 23ರವರೆಗೆ ಗದಗ ಜಿಲ್ಲೆಯ ನಗರ/ ಪಟ್ಟಣ/ ಗ್ರಾಮೀಣ ಪ್ರದೇಶಗಳ ತೆರೆದ ಸ್ಥಳಗಳಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ದಾಸ್ತಾನು ಮಾಡಿ ಮಾರಾಟ ಮಾಡುವ ಷರತ್ತಿಗೊಳಪಟ್ಟು ತಾತ್ಕಾಲಿಕವಾಗಿ ಸ್ಥಳಾಂತರಿಸಲು ಆದೇಶಿಸಲಾಗಿದೆ. ಅನಧಿಕೃತ ಪಟಾಕಿ ಅಂಗಡಿಗಳಿಗೆ ವ್ಯಾಪಾರ ಮಾಡುವುದನ್ನು ನಿರ್ಬಂಧಿಸಿದೆ.

ಲಕ್ಷ್ಮೇಶ್ವರ ತಾಲೂಕಿನ ಲಕ್ಷ್ಮೇಶ್ವರದ ಉಮಾ ಮಹಾವಿದ್ಯಾಲಯದ ಕ್ರೀಡಾಂಗಣ, ಶಿಗ್ಲಿಯ ಹೊಸ ಬಸ್ ಸ್ಟ್ಯಾಂಡ್ ಹತ್ತಿರ ಬಯಲು ಜಾಗೆ, ಶಿರಹಟ್ಟಿ ತಾಲೂಕಿನಲ್ಲಿ ಎಫ್.ಎಂ. ಡಬಾಲಿ ಹೈಸ್ಕೂಲ್ ಮೈದಾನ ಹಾಗೂ ಬೆಳ್ಳಟ್ಟಿಯ ಶ್ರೀ ಯೋಗಿ ವೇಮನ ಪ್ರೌಢಶಾಲೆ ಮೈದಾನ, ಮುಂಡರಗಿ ತಾಲೂಕು ಕ್ರೀಡಾಂಗಣ, ರೋಣದ ಜಕ್ಕಲಿ ರಸ್ತೆಯಲ್ಲಿರುವ ಸೊಸೈಟಿಯ ಬಯಲು ಜಾಗೆ ಹಾಗೂ ಹೊಳೆಆಲೂರದ ಎ.ಪಿ.ಎಂ.ಸಿ ಬಯಲು ಜಾಗೆ, ಗಜೇಂದ್ರಗಡದ ಶ್ರೀ ಸಂತೋಷ ತಂದೆ ಶ್ಯಾಮಸುಂದರ ಮಂತ್ರಿ ಇವರ ಖುಲ್ಲಾ ಜಾಗೆ, ನರೇಗಲ್‌ದ ಎ.ಪಿ.ಎಂ.ಸಿ ಗೌಡಾನ್ ಹತ್ತಿರ ಬಯಲು ಜಾಗೆ, ನರಗುಂದ ದಂಡಾಪೂರದ ಶ್ರೀರಾಮ ಮಂದಿರದ ಪಕ್ಕ ಇರುವ ಸರ್ಕಾರಿ ಜಾಗೆ, ಗದಗ ತಾಲೂಕಿನಲ್ಲಿ ವಿ.ಡಿ.ಎಸ್.ಟಿ ಕಾಲೇಜು ಮೈದಾನ ಹಾಗೂ ಮುಳಗುಂದದ ಎಸ್.ಜೆ.ಜೆ.ಎಂ ಸಂಯುಕ್ತ ಪದವಿಪೂರ್ವ ಕಾಲೇಜು ಮೈದಾನ ಈ ಸ್ಥಳಗಳಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ದಾಸ್ತಾನು ಮಾಡಿ ಮಾರಾಟ ಮಾಡುವ ಷರತ್ತಿಗೊಳಪಟ್ಟು ತಾತ್ಕಾಲಿಕವಾಗಿ ಸ್ಥಳಾಂತರಿಸಲು ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ಕೋಮು ಸೌಹಾರ್ದತೆಗೆ ಸಾಕ್ಷಿಯಾಗುವ ನರೇಗಲ್ ಗಣಪತಿ ಉತ್ಸವ

## ಆಶ್ರಯ ಕಾಲೋನಿ ಗಣೇಶೋತ್ಸವ ಎಲ್ಲಕ್ಕಿಂತ ಭಿನ್ನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ 3ನೇ ವಾರ್ಡಿನ ಜಕ್ಕಲಿ ರೋಡ್ ಆಶ್ರಯ ಕಾಲೋನಿಯಲ್ಲಿ ಪ್ರತಿ ವರ್ಷ ಸರ್ವ ಧರ್ಮದ ಜನರು ಸೇರಿ ಭಾವೈಕ್ಯತೆಯಿಂದ ಗಣಪತಿ ಮೂರ್ತಿ ಪ್ರತಿಷ್ಠಾಪನೆ ಮಾಡುವ ಮೂಲಕ ಕೋಮು ಸೌಹಾರ್ದತೆಗೆ ಸಾಕ್ಷಿಯಾಗಿದ್ದಾರೆ. ಅದರಲ್ಲೂ ಮುಸ್ಲಿಂ ಯುವಕರು, ಹಿರಿಯರು ಮುಂದಾಳತ್ವ ವಹಿಸಿ ಐದು ದಿನವೂ ಪೂಜೆ, ಪ್ರಸಾದ, ನಿರ್ವಹಣೆಯ ಕೆಲಸಗಳನ್ನು ಮಾಡುವ ಮೂಲಕ ಬೆಳಗಿನಿಂದ ರಾತ್ರಿಯವರೆಗೆ ಗಣಪತಿ ಸೇವೆಗೆ ಮುಂದಾಗುತ್ತಾರೆ.

ಗಣಪತಿ ಕಮಿಟಿಯಿಂದ ಓಣಿಯ ಪ್ರತಿ ಮನೆಯಿಂದ ದೇಣಿಗೆ ಸಂಗ್ರಹಿಸುತ್ತಾರೆ. ಮೂರ್ತಿಯ ವಿಸರ್ಜನೆ ಬಳಿಕ ಲೆಕ್ಕಪತ್ರ ಒಪ್ಪಿಸಿ ಅದರಲ್ಲಿ ಉಳಿಯುವ ಹಣದಲ್ಲಿ ಒಂದಿಷ್ಟು ಹಣವನ್ನು ಓಣಿಯಲ್ಲಿ ನಡೆಯುವ ತುರ್ತು ಘಟನೆಗಳಿಗೆ ಬಳಕೆ ಮಾಡಿಕೊಳ್ಳುತ್ತಾರೆ. ಇನ್ನುಳಿದ ಹಣದಲ್ಲಿ ಆರ್ಥಿಕವಾಗಿ ಹಿಂದುಳಿದ ಇಬ್ಬರು ಅಥವಾ ಮೂವರು ಯುವಕರಿಗೆ ನೀಡುತ್ತಾರೆ. ಅವರು ಮರು ವರ್ಷ ಗಣೇಶ ಉತ್ಸವದ ಒಂದು ತಿಂಗಳ ಮೊದಲು ಸ್ವಲ್ಪ ಹೆಚ್ಚಿನ ಹಣ ಸೇರಿಸಿ ಮರಳಿ ಕಮಿಟಿಗೆ ನೀಡುತ್ತಾರೆ. ಇದರಿಂದ ಎಷ್ಟೋ ಯುವಕರ ಕಿರು ವ್ಯಾಪರಕ್ಕೆ, ಕಷ್ಟಕ್ಕೆ ಸಹಾಯವಾಗಿದೆ ಎನ್ನುತ್ತಾರೆ ನಾರಾಯಣಪ್ಪ ಯಂಕಪ್ಪ ಮಾಳೋತ್ತರ.

ಸರ್ಕಾರದಿಂದ 1990ರಲ್ಲಿ ಉಚಿತವಾಗಿ ನೀಡಿದ ಇಲ್ಲಿನ ಮನೆಗಳಲ್ಲಿ ವಾಸ ಮಾಡುವ ಎಲ್ಲರೂ ಬಡವರು, ಕೃಷಿಕರು ಹಾಗೂ ಕೂಲಿ ಕಾರ್ಮಿಕರಾಗಿದ್ದಾರೆ. ಹಾಗಾಗಿ ಸಣ್ಣಪುಟ್ಟ ಕಾರ್ಯಕ್ರಮಗಳಿಗೆ ಉಪಯುಕ್ತವಾಗುವ ವಸ್ತುಗಳನ್ನು ಪ್ರತಿ ವರ್ಷ ಗಣಪತಿ ಕಮಿಟಿಯಿಂದ ಖರೀದಿಸುತ್ತಾ ಬಂದಿದ್ದಾರೆ. ಈ ಮೊದಲಿನ ವರ್ಷಗಳಲ್ಲಿ ಗೋಡೆಗೆ ಹಾಕುವ ಸ್ಕ್ರೀನ್, ಸ್ಟೇಜ್ ಸ್ಕ್ರೀನ್ ಖರೀದಿ ಮಾಡಲಾಗಿತ್ತು. ಅದನ್ನು ಓಣಿಯ ಯಾರದೇ ಮನೆಯಲ್ಲಿ ಕಾರ್ಯಕ್ರಮ ನಡೆದರೂ ಬಳಕೆ ಮಾಡಿಕೊಳ್ಳುತ್ತಿದ್ದರೆ. ಕಳೆದ ವರ್ಷ ಉಳಿದ ಹಣದಲ್ಲಿ ಲೈಟ್, ವೈರ್‌ಲೆಸ್ ಮೈಕ್, ಸೌಂಡ್ ಸಿಸ್ಟಂ ಖರೀದಿ ಮಾಡಿದ್ದಾರೆ. ಇವು ಜನರಿಗೆ ಉಪಯೋಗವಾಗಲಿವೆ ಎನ್ನುತ್ತಾರೆ ರೈಮಾನ್ ನದಾಫ್. ಗಣಪತಿ ಉತ್ಸವದ 15 ದಿನಗಳ ಮೊದಲು ಮಕ್ಕಳು ಕೋಲಾಟ, ನಾಟಕ, ಹಾಡು, ನೃತ್ಯ ಕಲಿಕೆಗೆ ಮುಂದಾಗುತ್ತಾರೆ. ಮೂರ್ತಿ ಪ್ರತಿಷ್ಠಾಪನೆಯ 4ನೇ ದಿನ ಸ್ಟೇಜ್ ಹಾಕಿ ಅಲ್ಲಿ ಮಕ್ಕಳಿಂದ ಕಲಾ ಪ್ರದರ್ಶನ ನಡೆಯುತ್ತದೆ.

> ಪ್ರತಿವರ್ಷ ಇಲ್ಲಿ ನಡೆಯುವ ಗಣಪತಿ ಉತ್ಸವದ ಕೊನೆಯ ದಿನ ಅಂದರೆ 5ನೇ ದಿನದ ಸಂಜೆ ಪೂಜೆಯ ಬಳಿಕ ನಡೆಯುವ ಪೂಜಾ ಸಾಮಗ್ರಿಗಳ ಖರೀದಿಗೆ ನೂರಾರು ಸಂಖ್ಯೆಯಲ್ಲಿ ಜನರು ಸೇರುತ್ತಾರೆ. ಚಿಕ್ಕ ವಸ್ತುವಿನಿಂದ ದೊಡ್ಡ ವಸ್ತುವಿನವರೆಗೂ ಸವಾಲಿನ ಭರಾಟೆ ನಡೆಯುತ್ತದೆ. ಮಕ್ಕಳ ಪಾಟಿ, ಪಾಟಿ ಚೀಲ (ಬ್ಯಾಗ್) ಎರಡ್ಮೂರು ಸಾವಿರದವರೆಗೆ ಹೋಗುತ್ತದೆ. ಅದರಲ್ಲೂ ಬೆಳ್ಳಿ ಸಾಮಗ್ರಿ, ಗಣಪತಿ ಮೂರ್ತಿಯ ಮೇಲಿನ ಆಭರಣಗಳಿಗೆ ಹಾಗೂ ಅಂತರಗಾಯಿಗಳಿಗೆ ಬಹು ಬೇಡಿಕೆ ಇರುತ್ತದೆ. ಗಣಪತಿ ಸವಾಲಿನಲ್ಲಿ ಭಾಗವಹಿಸಿ ಪಡೆದರೆ ಮುಂದಿನ ವರ್ಷದವರೆಗೂ ಧನಪ್ರಾಪ್ತಿ ಹಾಗೂ ಅಭಿವೃದ್ಧಿ ಹೊಂದುತ್ತೇವೆ ಎನ್ನುವ ನಂಬಿಕೆ ಇರುವ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸುತ್ತಾರೆ ಎನ್ನುತ್ತಾರೆ ನಾಗರಾಜ ಇಟಗಿ.

ರಾಮಾಯಣ, ಮಹಾಭಾರತದ ಸನ್ನಿವೇಶಗಳನ್ನು ಹಿಂದೂ-ಮುಸ್ಲಿಂ ಸಮುದಾಯದ ಮಕ್ಕಳು ಪ್ರದರ್ಶನ ಮಾಡುವ ಮೂಲಕ ಮೆಚ್ಚುಗೆಗೆ ಪಾತ್ರರಾಗಿದ್ದರು.

ಮಹಿಳೆಯರು, ಮಕ್ಕಳಿಗಾಗಿ ಪ್ರತಿ ವರ್ಷ ಸ್ಪರ್ಧೆ ಏರ್ಪಡಿಸಲಾಗುತ್ತದೆ. ಗಣಪತಿ ಉತ್ಸವದ ನಾಲ್ಕನೇ ದಿನ ಸಾರ್ವಜನಿಕರಿಗೆ ವಿಶೇಷ ಅನ್ನಸಂತರ್ಪಣೆ ಮಾಡುತ್ತಾರೆ. ನಾವು ಅಲ್ಲಾಹನೊಂದಿಗೆ ಗಣೇಶನನ್ನು ಆರಾಧನೆ ಮಾಡುತ್ತೇವೆ. ಇದರಿಂದ ನಮ್ಮ ಮನಸ್ಸಿಗೆ ಸಂತಸ ಸಿಕ್ಕಿದೆ. ಸಹೋದರತ್ವ ಭಾವನೆಯಿಂದ ಎಲ್ಲರೂ ಅನೋನ್ಯವಾಗಿದ್ದೇವೆ. ಇದನ್ನು ಮುಂದುವರೆಸಿಕೊಂಡು ಹೋಗುತ್ತೇವೆ ಎಂದು ಹಸನಸಾಬ್ ಕೊಪ್ಪಳ, ದಾದುಸಾಬ್ ನದಾಫ್, ರಾಜಾ ಮುದಗಲ್, ಶರಣಪ್ಪ ಕೊಂಡಿ, ಹನಮಂತಪ್ಪ ಜೋಡಗಂಬಳಿ, ಪರಸಪ್ಪ ರಾಠೋಡ ಅಭಿಪ್ರಾಯ ವ್ಯಕ್ತಪಡಿಸಿದರು.

## ಲಿಂ. ಡಾ. ಶಿವರಾತ್ರಿ ಸ್ವಾಮಿಗಳು ಎಂದಿಗೂ ಪ್ರಸ್ತುತ



■ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗೈಕ್ಯ ಡಾ. ಶಿವರಾತ್ರಿ ಮಹಾಸ್ವಾಮಿಗಳು ಬಾಲ್ಯಾವಧಿಯಿಂದಲೂ ಸಮಾಜಮುಖಿ ಜೀವನ ನಡೆಸುತ್ತ ಲಿಂಗದೀಕ್ಷೆ ನಂತರ ತಮ್ಮನ್ನು ಸಂಪೂರ್ಣ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ಸಾಹಿತ್ಯಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಮಾನವಕುಲದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿ ಇಂದಿಗೂ ಪ್ರಸ್ತುತರಾಗಿದ್ದಾರೆಂದು ನಿವೃತ್ತ ಕನ್ನಡ ಪ್ರಾಧ್ಯಾಪಕಿ ಡಾ. ಶಕುಂತಲಾ ಸಿಂಧೂರ ಹೇಳಿದರು.

ಅವರು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಸಂಯುಕ್ತವಾಗಿ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಐಕ್ಯೂಎಸಿ ಘಟಕದ ಅಡಿಯಲ್ಲಿ ಹಮ್ಮಿಕೊಂಡಿದ್ದ 'ಲಿಂ. ಡಾ. ಶಿವರಾತ್ರಿ ಸ್ವಾಮಿಗಳ ಜನ್ಮದಿನ' ಕಾರ್ಯಕ್ರಮದಲ್ಲಿ ಮುಖ್ಯ ಉಪನ್ಯಾಸಕರಾಗಿ ಮಾತನಾಡಿದರು.

ಶ್ರೀಗಳು ಗದಗ ನಗರದಲ್ಲಿ ಶರಣ ಸಾಹಿತ್ಯ ಪರಿಷತ್ತು ಸ್ಥಾಪಿಸುವ ಮೂಲಕ ಜಿಲ್ಲೆಯಲ್ಲಿ ಶರಣರ ಸಂದೇಶಗಳ ಚಿಂತನೆ ಸದಾಕಾಲ ಮುಂದುವರೆಯುವಂತೆ ಮಾಡಿರುವುದು ಶ್ಲಾಘನೀಯ. ಅವರ ಜೀವನ ಮತ್ತು ಲೋಕಕಲ್ಯಾಣ ಕಾರ್ಯಗಳನ್ನು ಸರ್ವಕಾಲಕ್ಕೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರ ಶರಣರ ನಡೆನುಡಿಯ ಅಗತ್ಯದ ಕುರಿತು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲೆ ಡಾ. ಸುಧಾ ಕೌಜಗೇರಿ ವಿದ್ಯಾರ್ಥಿಗಳು ಶರಣರ ಬದುಕನ್ನು ಅವಲೋಕಿಸಿ ಅವರ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಉಪದೇಶಿಸಿದರು.

ಇತಿಹಾಸ ಪ್ರಾಧ್ಯಾಪಕ ಮತ್ತು ಎನ್.ಎಸ್.ಎಸ್ ಘಟಕದ ಸಂಯೋಜಕ ಡಾ. ಅಪ್ಪಣ್ಣ ಹಂಜೆ ಸ್ವಾಗತಿಸಿದರು. ಎಸ್.ಎಂ. ಮರಿಗೌಡ್ರ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಐಕ್ಯೂಎಸಿ ಘಟಕದ ಸಂಚಾಲಕ ಡಾ. ಜಿತೇಂದ್ರ ಜಹಗೀರದಾರ, ಸಾಂಸ್ಕೃತಿಕ ವಿಭಾಗದ ಸಂಚಾಲಕ ರಮೇಶ ಹುಲಕುಂದ, ರಾಜ್ಯಶಾಸ್ತ್ರ ಪ್ರಾಧ್ಯಾಪಕರಾದ ಹುಸೇನಭಾಷಾ ಮತ್ತು ಮಹಾಂತೇಶ, ಇಂಗ್ಲಿಷ್ ಪ್ರಾಧ್ಯಾಪಕಿ ಸಾವಿತ್ರಿ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಗಜಾನನೋತ್ಸವದ ನಿಮಿತ್ತ ಹೆಸ್ಕಾಂ ಗದಗ ವಿಭಾಗೀಯ ಕಚೇರಿಯ ಮಹಿಳಾ ಮಂಡಳದ ಪದಾಧಿಕಾರಿಗಳು ಹಾಗೂ ಮಹಿಳಾ ಸಿಬ್ಬಂದಿಗಳು ವಿಘ್ನ ನಿವಾರಕನಿಗೆ ಪೂಜೆ ಸಲ್ಲಿಸಿ, ಗಣೇಶ ಚತುರ್ಥಿ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಿದರು.

## ಅನಾಥ ಮಕ್ಕಳ ಶಿಕ್ಷಣಕ್ಕೆ ದೇಣಿಗೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತಿಚೀನ ದಿನಗಳಲ್ಲಿ ಜನ್ಮ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸುವುದು ಮಕ್ಕಳಿಗೂ, ಪಾಲಕರಿಗೂ ಒಂದು ರೀತಿಯ ಪ್ರತಿಷ್ಠೆಯ ಪ್ರಶ್ನೆ ಎನ್ನುವಂತಾಗಿದೆ. ಆದರೆ ಪಟ್ಟಣದ ವೀರಯ್ಯ ಹಿರೇಮಠ ಅವರು ಈ ವರ್ಷ ತಮ್ಮ ಮಗನ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಅಚರಿಸುವ ಉದ್ದೇಶವನ್ನು ಕೈಬಿಟ್ಟು ಹೂವಿನಶಿಗ್ಲಿ ಶ್ರೀ ವಿರಕ್ತಮಠದ ಗುರುಕುಲ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅನಾಥ ಮಕ್ಕಳ ಶಿಕ್ಷಣಕ್ಕೆ ದೇಣಿಗೆ ನೀಡುವ ಮೂಲಕ ವಿಶೇಷತೆ ಮೆರೆದಿದ್ದಾರೆ.

ವೀರಯ್ಯ ಅವರು ವ್ಯಾಪಾರಿಯಾಗಿದ್ದು, ಎಲ್ಲರಂತೆ ಮಗನ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸುವ ನಿಟ್ಟಿನಲ್ಲಿ ನಿಶ್ಚಯ ಮಾಡಿದ್ದರು. ಆದರೆ ದುಂದು ವೆಚ್ಚವನ್ನು ಕೈಬಿಟ್ಟು ಇದನ್ನು ಅನಾಥ ಮಕ್ಕಳ ಶೈಕ್ಷಣಿಕ ಪ್ರಗತಿಗೆ ನೀಡುವದು ಯೋಗ್ಯ ಎನ್ನುವ ಯೋಚನೆ ಮಾಡಿ ಮಗನ ಹುಟ್ಟುಹಬ್ಬದ ನಿಮಿತ್ತ 51,101 ರೂಗಳನ್ನು ಶ್ರೀಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳಿಗೆ ಶುಕ್ರವಾರ ಸಲ್ಲಿಸಿದರು.

ಈ ವೇಳೆ ಶ್ರೀಗಳು ಮಾತನಾಡಿ, ಶ್ರೀಮಠದ ಗುರುಕುಲದಲ್ಲಿ ಸುಮಾರು 300ಕ್ಕೂ ಅಧಿಕ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದು, ಜನರು ನೀಡುವ ದೇಣಿಗೆಯ ಮೂಲಕ ಮಕ್ಕಳಿಗೆ ಊಟ, ವಸತಿಯೊಂದಿಗೆ ಉತ್ತಮ ಶಿಕ್ಷಣ ನೀಡಲಾಗುತ್ತಿದೆ. ಈ ಮಕ್ಕಳ ಶಿಕ್ಷಣಕ್ಕಾಗಿ ವೀರಯ್ಯ ಹಿರೇಮಠ ತಮ್ಮ ಮಗನ ಹುಟ್ಟುಹಬ್ಬದ ನಿಮಿತ್ತ ದೇಣಿಗೆ ನೀಡುವ ಮೂಲಕ ಸಮಾಜಕ್ಕೆ ಒಳ್ಳೆಯ ಸಂದೇಶ ನೀಡಿದ್ದಾರೆ ಎಂದು ಹೇಳಿದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ 2024-25ನೇ ಸಾಲಿನಲ್ಲಿ ಪ್ರವಾಸೋದ್ಯಮ/ ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಗೆ ಸೇರಿದ 292 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ (ಎಫ್.ಸಿ.ಐ) ಮೈಸೂರು ಹಾಗೂ ಇನ್ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್ಮೆಂಟ್ (ಐಎಚ್‌ಎಂ) ಅವರ ಮೂಲಕ ಸ್ಟೈಪಂಡ್, ವಸತಿ, ಊಟೋಪಚಾರ, ಯೂನಿಫಾರಂ ಸಹಿತ ತರಬೇತಿ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ಫುಡ್ ಮತ್ತು ಬೆವರೇಜ್ ಸರ್ವಿಸ್ ಸ್ಟೀವರ್ಡ್, ರೂಂ ಅಟೆಂಡೆಂಟ್, ಫ್ರಂಟ್ ಆಫೀಸ್ ಅಸೋಸಿಯೇಟ್, ಮಲ್ಟಿ ಕ್ಯೂಸಿನ್ ಕುಕ್ ತರಬೇತಿಗಳನ್ನು ಪಡೆಯಲು ಅರ್ಜಿಗಳನ್ನು ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಗದಗ ಕಚೇರಿಯಲ್ಲಿ ಅರ್ಜಿ ವಿತರಿಸಲಾಗುವುದು. ಸದರಿ ತರಬೇತಿ ಪಡೆಯಲು ಆಸಕ್ತಿ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿಗಳನ್ನು ಸೆಪ್ಟೆಂಬರ 15 ರೊಳಗೆ ಸಲ್ಲಿಸಬಹುದಾಗಿದೆ. ತರಬೇತಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಎ.ಸಿ. ಕಚೇರಿ ಕಟ್ಟಡ, ಗದಗ ಜಿಲ್ಲೆ -582 103 ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಅಥವಾ ಕಚೇರಿಯ ದೂರವಾಣಿ ಸಂಖ್ಯೆ 08372-233017 ಮೂಲಕ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ಬೆಳೆ ಹಾನಿ; ರೈತ ಆತ್ಮಹತ್ಯೆ



■ವಿಜಯಸಾಕ್ಷಿ ಸುದ್ದಿ, ರೋಣ

ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ಬೆಳೆ ಹಾನಿ ಸಂಭವಿಸಿ, ಸಾಲ ತೀರಿಸಲಾಗದೆ ತಾಲೂಕಿನ ಹುನಗುಂಡಿ ಗ್ರಾಮದಲ್ಲಿ ರೈತನೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಗುರುವಾರ ನಡೆದಿದೆ.

ಹುನಗುಂಡಿಯ ರೈತ ಸಿದ್ದಲಿಂಗಯ್ಯ ಶಿವಯ್ಯ ವಸ್ತ್ರದ (50) ಆತ್ಮಹತ್ಯೆಗೆ ಶರಣಾಗಿದ್ದಾರೆ. ಗ್ರಾಮದಲ್ಲಿ 4 ಎಕರೆ 19 ಗುಂಟೆ ಜಮೀನನ್ನು ಹೊಂದಿದ್ದಾನೆ. ಕೃಷಿ ಉದ್ದೇಶಕ್ಕಾಗಿ ಹೊಳೆಆಲೂರ ಕೆವ್ಹಿಜಿ ಬ್ಯಾಂಕಿನಲ್ಲಿ 4 ಲಕ್ಷ ರೂಗಳ ಬೆಳೆಸಾಲ, ಹುನಗುಂಡಿ ಗ್ರಾಮದ ವ್ಯವಸಾಯ ಸೇವಾ ಸಹಕಾರಿ ಸಂಘದಲ್ಲಿ 80 ಸಾವಿರ ರೂ, ಟ್ರ್ಯಾಕ್ಟರ್ ಖರೀದಿಗಾಗಿ 2 ಲಕ್ಷ ರೂಗಳ ಸಾಲ ಪಡೆದುಕೊಂಡಿದ್ದರು. ಆದರೆ ಈ ಬಾರಿಯೂ ನಿರಂತರ ಮಳೆಯಿಂದ ಬೆಳೆಗಳು ಹಾನಿಯಾಗಿದ್ದು, ಸಾಲ ಹೇಗೆ ತಿರಿಸಬೇಕು ಎನ್ನುವ ಚಿಂತೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಕುರಿತು ರೋಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬಿಜೆಪಿ ಮಂಡಲ ಅಧ್ಯಕ್ಷರ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಶಿರಹಟ್ಟಿ ಮಂಡಲ ಅಧ್ಯಕ್ಷರನ್ನಾಗಿ ಸುನೀಲ್ ಮಹಾಂತಶೆಟ್ಟರ ಅವರನ್ನು ನೇಮಕ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಶಾಸಕ ಡಾ. ಚಂದ್ರ ಲಮಾಣಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಸವರಾಜ ಕೆಲಗಾರ, ಪಕ್ಷದ ಚುನಾವಣಾಧಿಕಾರಿ ಶಶಿಮೌಳಿ ಕುಲಕರ್ಣಿ, ಸಹ ಚುನಾವಣಾಧಿಕಾರಿ ಎಂ.ಎಸ್. ಕರೀಗೌಡ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ, ಆರ್.ಕೆ. ಚವ್ಹಾಣ, ಪಕ್ಕಿರೇಶ ರಟ್ಟಿಹಳ್ಳಿ, ಬಿ.ಡಿ. ಪಲ್ಲೇದ ಮುಂತಾದವರು ಉಪಸ್ಥಿತರಿದ್ದರು.

## ಮಕ್ಕಳ ಪ್ರತಿಭೆಯನ್ನು ಮೊಬೈಲ್ ಹತ್ತಿಕ್ಕುತ್ತಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚಿನ ದಿನಗಳಲ್ಲಿ ಮಕ್ಕಳ ಕೈಲಿ ಮೊಬೈಲ್ ನೀಡುವ ಮೂಲಕ ಅವರಲ್ಲಿರುವ ಪ್ರತಿಭೆಯನ್ನು ಹತ್ತಿಕ್ಕುವ ಕಾರ್ಯವಾಗುತ್ತಿದೆ. ವಿದ್ಯಾರ್ಥಿಗಳು ಮೋಬೈಲ್‌ಗಳನ್ನು ಕೈಬಿಟ್ಟು ಕ್ರೀಡೆಯಲ್ಲಿ ತೊಡಗಿಸಿಕೊಂಡಲ್ಲಿ ಅದರಲ್ಲಿ ಸಾಧನೆ ಮಾಡಬಹುದು ಎಂದು ಪುರಸಭೆ ಮಾಜಿ ಅಧ್ಯಕ್ಷೆ ಹಾಗೂ ಹಾಲಿ ಸದಸ್ಯೆ ಅಶ್ವಿನಿ ಅಂಕಲಕೋಟಿ ಹೇಳಿದರು.

ಅವರು ಪಟ್ಟಣದ ಉಮಾವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ಶುಕ್ರವಾರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.3ರ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 2025-26ನೇ ಸಾಲಿನ ಲಕ್ಷ್ಮೇಶ್ವರ ಗ್ರೂಪ್ ನಂಬರ್-2ರ ಗ್ರೂಪ್ ಮಟ್ಟದ ಇಲಾಖೆ ಕ್ರೀಡಾಕೂಟದಲ್ಲಿ ಒಲಿಂಪಿಕ್ ಧ್ವಜಾರೋಹಣ ನೆರವೇರಿಸಿ ಮಾತನಡಿದರು.

ನಿಜವಾದ ಕ್ರೀಡಾಪಟು ಎಂದೂ ಕೆಟ್ಟ ನಾಗರಿಕ ಆಗಲಾರ. ಎಲ್ಲಾ ವಿದ್ಯಾರ್ಥಿಗಳು ಪ್ರತಿದಿನ ದೈಹಿಕ ಚಟುವಟಿಕೆಗಳಲ್ಲಿ ಕ್ರಿಯಾಶೀಲವಾಗಿ ತೊಡಗಿಕೊಳ್ಳಬೇಕು ಎಂದು ಕರೆನೀಡಿದರು. ಒಲಿಂಪಿಕ್ ಕ್ರೀಡಾ ಜ್ಯೋತಿಯನ್ನು ಈಶ್ವರ ಮೆಡ್ಲೇರಿ ಸ್ವೀಕರಿಸಿದರು. ದಿಗಂಬರ ಪೂಜಾರ ಕ್ರೀಡಾ ಜ್ಯೋತಿ ಬೆಳಗಿಸಿದರು. ಚಂದ್ರು ನೇಕಾರ ಗುಂಡು ಎಸೆಯುವುದರ ಮೂಲಕ ಕ್ರೀಡೆಗೆ ಚಾಲನೆ ನೀಡಿದರು. ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಸೋಮಣ್ಣ ಮಾಗಡಿ ವಹಿಸಿದ್ದರು. ಅತಿಥಿಗಳಾಗಿ ಎಲ್.ಎ. ನಡುವಿನಮನಿ, ಬಿ.ಎಮ್. ಕುಂಬಾರ, ಸತೀಶ್ ಬೋಮಲೆ, ಉಮೇಶ್ ನೇಕಾರ, ಡಿ.ಡಿ. ಲಮಾಣಿ, ಎಸ್.ಕೆ. ಹವಾಲ್ದಾರ, ಎನ್.ಪಿ. ಪ್ಯಾಟಿಗೌಡರ, ಆರ್.ಎಂ. ಶಿರಹಟ್ಟಿ, ಆರ್.ಬಿ. ಮಾಂಡ್ರೆ ಇದ್ದರು. ಚನ್ನಪ್ಪ ಜಗಲಿ, ರಮೇಶ್ ಹಾಳದೋಟದ, ಎಮ್.ಎಮ್. ಕಳಸೂರ ಪ್ರಾಯೋಜಕತ್ವ ವಹಿಸಿದ್ದರು. ಎಚ್.ಡಿ. ನಿಂಗರೆಡ್ಡಿ ನಿರೂಪಿಸಿದರು.

### ಗದಗ ರೈಲು ನಿಲ್ದಾಣಕ್ಕೆ ಪಂ. ಪುಟ್ಟರಾಜ ಗವಾಯಿಗಳ ಹೆಸರಿಡಲು ರೈತ ಸಂಘದ ಆಗ್ರಹ

## ಬೇಡಿಕೆ ಈಡೇರಿಕೆಗೆ ಉಪವಾಸ ಸತ್ಯಾಗ್ರಹ




> ಸಂಘದ ಜಿಲ್ಲಾಧ್ಯಕ್ಷ ಮಂಜುನಾಥ ಗುಡದೂರ ಮಾತನಾಡಿ, ಸೆ. 1ರಂದು ಬೆಳಗ್ಗೆ 8.30ಕ್ಕೆ ಉಪವಾಸ ಸತ್ಯಾಗ್ರಹ ಆರಂಭವಾಗಲಿದೆ. ನಮ್ಮ ಹೋರಾಟಕ್ಕೆ ಕನ್ನಡಪರ ಸಂಘಟನೆಗಳು, ರೈತ ಸಂಘಟನೆಗಳು ಮತ್ತು ಪ್ರಗತಿಪರ ಸಂಘಟನೆಗಳು ಬೆಂಬಲ ಸೂಚಿಸಬೇಕು ಎಂದು ವಿನಂತಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ನವೀಕೃತ ರೈಲು ನಿಲ್ದಾಣಕ್ಕೆ ಪದ್ಮಭೂಷಣ ಡಾ. ಪಂಡಿತ ಪುಟ್ಟರಾಜ ಗವಾಯಿಗಳ ಹೆಸರನ್ನು ನಾಮಕರಣ ಮಾಡಬೇಕೆಂದು ಆಗ್ರಹಿಸಿ, ಸೆ. 1ರಂದು ರೈಲು ನಿಲ್ದಾಣದ ಆವರಣದಲ್ಲಿ ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಕರ್ನಾಟಕ ರಾಜ್ಯ ಡಾ. ಪಂ. ಪುಟ್ಟರಾಜ ರೈತ ಸಂಘದ ರಾಜ್ಯಾಧ್ಯಕ್ಷ ಎಂ.ಪಿ. ಮುಳಗುಂದ ತಿಳಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈಲ್ವೆ ನಿಲ್ದಾಣಕ್ಕೆ ಪುಟ್ಟರಾಜರ ಹೆಸರಿಡಲು ಒತ್ತಾಯಿಸಿ ಈಗಾಗಲೇ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮತ್ತು ರೈಲ್ವೆ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿದೆ. ಈವರೆಗೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಮಲ್ಲಸಮುದ್ರದ ಫಕ್ಕಿರೇಶ್ವರ ಸ್ವಾಮೀಜಿ ಮಾತನಾಡಿ, ಹುಬ್ಬಳ್ಳಿ ರೈಲು ನಿಲ್ದಾಣಕ್ಕೆ ಶ್ರೀ ಸಿದ್ಧಾರೂಢ ಮತ್ತು ತುಮಕೂರು ರೈಲು ನಿಲ್ದಾಣಕ್ಕೆ ಶ್ರೀ ಸಿದ್ಧಗಂಗಾ ಶಿವಕುಮಾರ ಸ್ವಾಮೀಜಿ ಅವರ ಹೆಸರನ್ನು ನಾಮಕರಣ ಮಾಡಿದಂತೆ, ಪಂ. ಪುಟ್ಟರಾಜ ಗವಾಯಿಗಳ ಹೆಸರನ್ನು ಗದಗ ರೈಲು ನಿಲ್ದಾಣಕ್ಕೆ ಇಡಬೇಕೆಂಬುದು ನಮ್ಮ ಬೇಡಿಕೆಯಾಗಿದೆ ಎಂದರು.

ಪಂ. ಪುಟ್ಟರಾಜ ಗವಾಯಿಗಳು ಸಾವಿರಾರು ಅಂಧ ಮತ್ತು ಅನಾಥ ಮಕ್ಕಳಿಗೆ ಆಶ್ರಯ, ಶಿಕ್ಷಣ ಹಾಗೂ ಸಂಗೀತ ಜ್ಞಾನ ನೀಡಿ, ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಿದ್ದಾರೆ. ಅವರ ಈ ಮಹೋನ್ನತ ಸೇವೆಯನ್ನು ಗುರುತಿಸಿ ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷ ಅಷ್ಪಾಕ್‌ಅಲಿ ಹೊಸಳ್ಳಿ, ಗೌರವಾಧ್ಯಕ್ಷ ಅಶೋಕ ಬಸೆಟ್ಟಿ, ಎಂ.ಎಸ್. ಪರ್ವತಗೌಡ್ರ, ರಘುನಾಥರೆಡ್ಡಿ ಹುಚ್ಚಣ್ಣವರ, ಜಾನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka